ಸಂಪುಟ : 8 ಸಂಚಿಕೆ : 269 ಪುಟ : 4 ಬೆಲೆ : 3.00 ಮಂಗಳವಾರ ಡಿಸೆಂಬರ್ 5, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 269 Pages : 4 Price : 3.00 Tuesday December 5, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ತೆಲಂಗಾಣದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ: ಶಾಸಕ ಜಿ.ಎಸ್. ಪಾಟೀಲ ಹರ್ಷ

■ವಿಜಯಸಾಕ್ಷಿ ಸುದ್ದಿ, ರೋಣ



ತೆಲಂಗಾಣ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಿರುವುದು ಹರ್ಷ ತಂದಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಈ ಬಾರಿಯ ವಿಧಾನ ಸಭೆಯ ಚುನಾವಣೆಗೆ ನಾನು ಸಹ ವೀಕ್ಷಕನಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಪರವಾಗಿ ಪ್ರಚಾರ ಕಾರ್ಯವನ್ನು ನಡೆಸಿದ್ದೇನೆ. ತೆಲಂಗಾಣದಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಮತದಾರರು ಒಲವು ಹೊಂದಿದ್ದಾರೆ ಎಂಬುದು ಖಚಿತವಾಗಿತ್ತು. ಮತದಾರರು ಸಹ ಪಕ್ಷದ ಅಭೂತಪೂರ್ವ ಗೆಲುವಿಗೆ ಕಾರಣರಾಗಿದ್ದು, ರಾಷ್ಟ್ರ, ರಾಜ್ಯ ಹಾಗೂ ಸ್ಥಳೀಯ ಮುಖಂಡರು, ಕಾರ್ಯಕರ್ತರು ಪಕ್ಷದ ಗೆಲುವಿನಲ್ಲಿ ಮುಖ್ಯ ಪಾತ್ರ ವಹಿಸಿದ್ದಾರೆ.

ಛತ್ತಿಸ್‌ಘಡ, ಮಧ್ಯಪ್ರದೇಶ, ರಾಜಸ್ಥಾನಗಳಲ್ಲಿ ನಮ್ಮ ಪಕ್ಷ ಸೋತಿರಬಹುದು. ಆದರೆ ಕಳೆದ ಬಾರಿಗಿಂತ ಶೇಕಡವಾರು ಮತಗಳ ಪ್ರಮಾಣದಲ್ಲಿ ಹೆಚ್ಚಳವಾಗಿದ್ದು, ಇದು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಶಕ್ತಿ ತುಂಬಲಿದೆ ಎಂದು ತಮ್ಮ ಆಶಾಭಾವನೆಯನ್ನು ವ್ಯಕ್ತಪಡಿಸಿದರು.

ವ್ಹಿ.ಆರ್. ಗುಡಿಸಾಗರ, ವ್ಹಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ, ಬಸವರಾಜ ನವಲಗುಂದ ಉಪಸ್ಥಿತರಿದ್ದರು.

## ಬೆಳಗಾವಿ ವಿಭಾಗ ಮಟ್ಟದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಿಗೆ ಐ.ಇ.ಸಿ/ಎಸ್.ಬಿ.ಸಿ.ಸಿ. ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯು ಶನಿವಾರದಂದು ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿತು.

ಬೆಳಗಾವಿಯ ಆರೋಗ್ಯ ಇಲಾಖೆಯ ಉಪನಿರ್ದೇಶಕರಾದ ಡಾ. ಎಂ.ಎಸ್. ಪಲ್ಲೇದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ ಅಧ್ಯಕ್ಷತೆ ವಹಿಸಿದ್ದರು.

ಕೆ.ಎಸ್.ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್, ಜಿಲ್ಲಾ ಕುಷ್ಟರೋಗ ನಿಯಂತ್ರಣ ಅಧಿಕಾರಿ ಡಾ.ರಾಜೇಂದ್ರ ಬಸರಿಗಿಡದ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ವೆಂಕಟೇಶ್ ರಾಠೋಡ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಹಾಗೂ ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಡಿ.7ರಂದು ಬೆಳಗಾವಿಯಲ್ಲಿ ಮಹದಾಯಿ ಯೋಜನೆ ಜಾರಿಗೆ ಒತ್ತಾಯಿಸಿ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ




ರಾಜ್ಯದಲ್ಲಿ ಬರ ಆವರಿಸಿದ್ದರೂ ಈವರೆಗೂ ಬೆಳೆವಿಮೆ ಬಂದಿಲ್ಲ. ಸರಕಾರದ ನಿಯಮಾವಳಿ ಅನ್ವಯ ರೈತರು ಪ್ರೀಮಿಯಂ ಪಾವತಿಸಿದ್ದಾರೆ. ಆದರೂ ವಿಮೆ ಹಣ ಬಿಡುಗಡೆಯಾಗಿಲ್ಲ ಎಂದು ಕರ್ನಾಟಕ ರೈತ ಸೇನೆ ರೋಣ ತಾಲೂಕು ಉಪಾಧ್ಯಕ್ಷ ಶಿವಲಿಂಗಪ್ಪ ಬೋಪಳಾಪುರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರಕಾರ ಬೆಳೆವಿಮೆ ಯೋಜನೆಯನ್ನು ಖಾಸಗಿ ಸಂಸ್ಥೆಗೆ ವಹಿಸಿರುವುದೇ ಇದಕ್ಕೆ ಕಾರಣ. ತಕ್ಷಣ ಈ ಯೋಜನೆಯನ್ನು ಸರಕಾರಿ ವಿಮಾ ಕಂಪನಿಗೆ ವಹಿಸಬೇಕು. ಬೆಳೆ ಹಾನಿಯನ್ನು ಸರಕಾರವೇ ಪರಿಶೀಲನೆ ನಡೆಸಿ ತಕ್ಷಣವೇ ವಿಮೆ ಹಣ ರೈತರಿಗೆ ಜಮೆ ಆಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಜ್ಯದ ಸಂಸದರು ಬರ ಪರಿಹಾರಕ್ಕೆ ಕೇಂದ್ರ ಸರಕಾರದ ಮೇಲೆ ಒತ್ತಡ ತರಲಿಲ್ಲ. ಮಹದಾಯಿ ಯೋಜನೆ ಜಾರಿಗೂ ಕ್ರಮ ಕೈಗೊಂಡಿಲ್ಲ. ಈ ವಿಷಯದಲ್ಲಿ ರಾಜ್ಯ ಸರಕಾರವೂ ದಿಟ್ಟ ನಿಲುವು ತೆಗೆದುಕೊಂಡಿಲ್ಲ. ಯೋಜನೆ ಜಾರಿಗೆ ಒತ್ತಾಯಿಸಿ ಇದೇ ಡಿ. 7 ರಂದು ಬೆಳಗಾವಿಯಲ್ಲಿ ನಡೆಯಲಿರುವ ಅಧಿವೇಶನ ಸಂದರ್ಭದಲ್ಲಿ ಪ್ರತಿಭಟನೆ ನಡೆಸಿ ಸರಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 5ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 34, 35 ಹುಡ್ಕೋ ಆದರ್ಶ ನಗರ 3ನೇ ಕ್ರಾಸ್, ನೀಲಮ್ಮ ತಾಯಿ ಮಠದ ಲೈನ್, ಹಿರೇಮಠದವರ ಲೈನ್, ಈಶ್ವರ ಗುಡಿ, ಸಚ್ಚಿದಾನಂದ ಮಠದ ಲೈನ್, ನೌಕರರ ಭವನ, ಗಿರಣಿ ಲೈನ್, ಶಿವಾನಂದ ಗಾರ್ಡನ್, ಗಣೇಶ ಗುಡಿಯ ಸುತ್ತಮುತ್ತಲಿನ ಲೈನ್ ಗಳು.

ವಾರ್ಡ್ ನಂ. 15,16,17,26 ಡಿಸಿ ಮಿಲ್ ರೋಡ್, ಅಕ್ಕನ ಬಳಗ, ಶಹಪೂರ ಪೇಟೆ, ಜವಳಗಲ್ಲಿ, ಭಜಂತ್ರಿ ಓಣಿ, ಬಸವೇಶ್ವರ ಗುಡಿ ಲೈನ್, ಕರ್ನಾಟಕ ಟಾಕೀಸ್ ಅಂಗನವಾಡಿ, ಮೀನದ ಮಾರ್ಕೆಟ್ ರೋಡ್, ಅಡ್ಡೆದ ಲೈನ್, ತಹಸೀಲ್ದಾರ ಆಫೀಸ್ ಲೈನ್, ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಮಠದ ಹಿಂದಿನ ಭಾಗ, ಗಣೇಶ ಗುಡಿ ಲೈನ್.

ವಾರ್ಡ್ ನಂ. 16 ಡಿಸಿ ಮಿಲ್ ರೋಡ್, ಅಂಬೇಡ್ಕರ್ ನಗರ, ಹೊಂಬಳ ನಾಕಾ, ಅಡ್ಡೆದ ಲೈನ್, ಶೌಚಾಲಯದ ಭಾಗಗಳು, ಜನತಾ ಕಾಲೋನಿ, ದುರ್ಗಮ್ಮನ ಗುಡಿ ಲೈನ್, ಮಸೂತಿ ಹಿಂದಿನ ಮುಂದಿನ ಲೈನ್ ಕೆಲವು ಉಳಿದ ಭಾಗಗಳು. ಮೆಹರ್‌ವಾಡೆ ಮಾಸ್ತರ್ ಲೈನ್, ಬಾಕಳೆಯವರ ಲೈನ್, ಹುಬ್ಬಳ್ಳಿಮಠ ಲೈನ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 6,7,10 ಪಂಚಲಕ್ಷ್ಮಿ ಬಡಾವಣೆ, ಭಜಂತ್ರಿ ಓಣಿ, ಅಂಬೇಡ್ಕರ್ ನಗರ, ದಿಬ್ಬದ ಲೈನ್, ಕುಲಕರ್ಣಿ ಗಲ್ಲಿ, ವಾರ್ಡ್ ನಂ. 22 ಅಪಾರ್ಟ್ಮೆಂಟ್ ಲೈನ್, ಮಸೂತಿ ಪೂರ್ತಿ ಭಾಗಗಳು. ವಾರ್ಡ್ ನಂ. 33 ಕೇಶವನಗರ 3 ಭಾಗಗಳು, ಹುಬ್ಬಳ್ಳಿ ರೋಡ್, ಡಿಸಿ ಆಫೀಸ್, ಉದಯನಗರ, ಬ್ಯಾಂಕರ್ಸ್ ಕಾಲೋನಿ,

ವಾರ್ಡ್ ನಂ. 5 ನರಸಾಪುರ ಆಶ್ರಯ ಕಾಲೋನಿ.

ಕುಡಿಯುವ ನೀರಿನ ನಳ ಹೊಂದಿರುವ ನಾಗರಿಕರು ತಮ್ಮ ನೀರಿನ ಕರ ತುಂಬಿ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಗಲಿದ ಗಣ್ಯರಿಗೆ ಸಂತಾಪ । ಮೃತರ ಗೌರವಾರ್ಥ ಸದನದಲ್ಲಿ ಒಂದು ನಿಮಿಷ ಮೌನಾಚರಣೆ

## ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಆರಂಭ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ



ಹದಿನಾರನೇ ವಿಧಾನಸಭೆಯ ಎರಡನೇ ಅಧಿವೇಶನ ಬೆಳಗಾವಿಯ ಸುವರ್ಣಸೌಧದಲ್ಲಿ ಸೋಮವಾರದಿಂದ ಆರಂಭವಾಯಿತು. ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಹಾಗೂ ಸದನದ ಸದಸ್ಯರು ಸಂವಿಧಾನ ಪೀಠಿಕೆ ಓದುವ ಮೂಲಕ ಅಧಿಕವೇಶನದ ಕಾರ್ಯ ಕಲಾಪಗಳಿಗೆ ಚಾಲನೆ ನೀಡಿದರು.

ಸಭಾಧ್ಯಕ್ಷ ಯು.ಟಿ. ಖಾದರ್ ಅವರು, ಮಾಜಿ ಸಭಾಧ್ಯಕ್ಷ ಡಿ.ಬಿ. ಚಂದ್ರೇಗೌಡ, ಮಾಜಿ ಸಚಿವ ಶ್ರೀರಂಗದೇವರಾಯಲು, ಮಾಜಿ ಶಾಸಕರುಗಳಾದ ಸಿ.ವೆಂಕಟೇಶಪ್ಪ, ಶ್ರೀಕಾಂತ್ ಶೆಟ್ಟಪ್ಪ ಭೀಮಣ್ಣವರ, ವಿಲಾಸಬಾಬು ಆಲಮೇಕರ್, ಈಶಾನ್ಯ ರಾಜ್ಯಗಳ ಮಾಜಿ ರಾಜ್ಯಪಾಲರಾಗಿದ್ದ ಪಿ.ಬಿ. ಆಚಾರ್ಯ ಹಾಗೂ ಇತ್ತೀಚೆಗೆ ಉಗ್ರರ ದಾಳಿಯಲ್ಲಿ ಮೃತಪಟ್ಟ ಮಂಗಳೂರು ಜಿಲ್ಲೆಯ ಕ್ಯಾಪ್ಟನ್ ಎಂ.ವಿ. ಪ್ರಾಂಜಲ್ ಸೇರಿದಂತೆ ಕ್ಯಾಪ್ಟನ್ ಶುಭಂ ಗುಪ್ತಾ, ಹವಾಲ್ದಾರ್ ಅಬ್ದುಲ್ ಮಜಿದ್, ಲಾನ್ಸ್ ನಾಯ್ಕ್, ಸಂಜಯ್ ಬಿಸ್ಟ್ ಮತ್ತು ಪಾರಾಟ್ರುಪರ್ ಸಚಿನ್ ಲಾರ್ ಅವರಿಗೆ ಸಂತಾಪ ಸೂಚನಾ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ನಿರ್ಣಯದ ಮೇಲೆ ಮಾತನಾಡಿ, ಡಿ.ಬಿ. ಚಂದ್ರೇಗೌಡ ಅವರು ಒಳ್ಳೆಯ ಸಂಸ್ಕಾರಗಳನ್ನು ಮೈಗೂಡಿಸಿಕೊಂಡಿದ್ದ ಮೇರು ವ್ಯಕ್ತಿಯಾಗಿದ್ದರು. ಸದನ ಕಾರ್ಯಕಲಾಪಗಳ ಬಗ್ಗೆ ಅಪಾರ ಜ್ಞಾನ ಹೊಂದಿದ್ದರು. ಅವರೊಂದಿಗಿನ ಒಡನಾಟ ಸದಾಕಾಲ ಸ್ಮರಣೀಯ ಎಂದರು.

ವಿಜಯನಗರ ಸಾಮ್ರಾಜ್ಯದ ರಾಜ ಮನೆತನಕ್ಕೆ ಸೇರಿದ ಗಂಗಾವತಿ ತಾಲ್ಲೂಕಿನ ಆನೆಗೊಂದಿಯ ಶ್ರೀರಂಗದೇವರಾಯಲು ಅವರು, ಸರಳ ವ್ಯಕ್ತಿತ್ವದ ರಾಜಕಾರಣಿಯಾಗಿದ್ದರು. ಅವರ ಅಧಿಕಾರಾವಧಿಯಲ್ಲಿ ಹಲವು ಜನಪರ ಕಾರ್ಯಗಳನ್ನು ಕೈಗೊಂಡು ಜನಮಾನಸದಲ್ಲಿ ಚಿರಸ್ಥಾಯಿಯಾಗಿದ್ದಾರೆ ಎಂದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಡಿ.ಬಿ. ಚಂದ್ರೇಗೌಡ ರಾಜ್ಯದ ಮುತ್ಸದ್ದಿ ರಾಜ–ಕಾರಣಿಯಾಗಿದ್ದರು. ಹಲವು ರಾಜಕೀಯ ವಿಷಯಗಳಿಗೆ ಡಿ.ಬಿ. ಚಂದ್ರೇಗೌಡರ ಬಳಿ ತೆರಳಿ ಮಾಹಿತಿ ಪಡೆದುಕೊಳ್ಳುತ್ತಿದ್ದೆ. ಇಂದಿರಾಗಾಂಧಿ ಅವರು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲ್ಲಲು ಡಿ.ಬಿ. ಚಂದ್ರೇಗೌಡ ಅವರು ಕ್ಷೇತ್ರ ತ್ಯಾಗ ಮಾಡಿದರು. ಬೆಂಗಳೂರಿನಿಂದ ಬಿಜೆಪಿ ಪಕ್ಷದ ಪರವಾಗಿ ಲೋಕಸಭೆಗೆ ಸ್ಪರ್ಧಿಸಿ ಜಯಶೀಲರಾದರು. ವಿಧಾನ ಸಭೆ, ಪರಿಷತ್, ಲೋಕಸಭೆ ಹಾಗೂ ರಾಜ್ಯ ಸಭೆಗಳ ಸದಸ್ಯರಾಗಿ ಕರ್ತವ್ಯ ನಿರ್ವಹಿಸಿದ ಹೆಮ್ಮೆ ಅವರದು ಎಂದರು.

▸▸3ನೇ ಪುಟಕ್ಕೆ

### ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ.ಪಾಟೀಲ ಕರೆ

## ವಿಕಲಚೇತನರಲ್ಲಿ ಆತ್ಮಸ್ಥೈರ್ಯ ಮೂಡಿಸುವ ಕಾರ್ಯವಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರಲ್ಲಿ ಆತ್ಮಸ್ಥೈರ್ಯ ಮೂಡಿಸುವ ಕೆಲಸವಾಗಬೇಕು. ಸಮಾಜದಲ್ಲಿ ವಿಕಲಚೇತನರನ್ನು ಅಶಕ್ತರು ಎಂಬ ಕೀಳರಿಮೆಯಿಂದ ನೋಡಬಾರದು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,

▸▸3ನೇ ಪುಟಕ್ಕೆ

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ವಿಕಲಚೇತನ ಮಕ್ಕಳು ತಮ್ಮ ವಿಕಲತೆ ಬಗ್ಗೆ ಕೀಳರಿಮೆ ಇಟ್ಟುಕೊಳ್ಳಬಾರದು. ಅವರಿಗೆ ದೇವರು ಬೇರೆ ರೀತಿಯಲ್ಲಿ ಅಗಾಧ ಶಕ್ತಿ ಕೊಟ್ಟಿರುತ್ತಾರೆ. ಜಿಲ್ಲೆಯ ವೀರೇಶ್ವರ ಪುಣ್ಯಾಶ್ರಮದ ಡಾ.ಪಂ. ಪುಟ್ಟರಾಜ ಗವಾಯಿಗಳು ಅಂಧರಾಗಿದ್ದರೂ ಸಂಗೀತ ಕ್ಷೇತ್ರದಲ್ಲಿ ಜಗತ್ತಿಗೆ ದೊಡ್ಡ ಕೊಡುಗೆ ಕೊಟ್ಟಿದ್ದಾರೆ. ಅಂಗವಿಕಲರ ಸರ್ವತೋಮುಖ ಬೆಳವಣಿಗೆಗೆ ಸರ್ಕಾರದಿಂದ ವಿತರಿಸಿದ ವಿಕಲಚೇತನರ ಸ್ಕಾಲರ್‌ಶಿಪ್, ಸಾಧನ–ಸಲಕರಣೆಗಳ ಸದ್ಬಳಕೆಯಾಗಬೇಕೆಂದರು.



## ಸಂಪಾದಕೀಯ

# ಆಡಳಿತ ವಿರೋಧಿ ಅಲೆ ಒಪ್ಪಿಕೊಳ್ಳಿ

ದೇಶದಲ್ಲಿ ತೀವ್ರ ಸಂಚಲನ ಮೂಡಿಸಿದ್ದ ಮತ್ತು ಲೋಕಸಭೆ ಚುನಾವಣೆಯ ದಿಕ್ಸೂಚಿ ಎಂದು ಭಾವಿಸಲಾಗಿದ್ದ ಪಂಚ ರಾಜ್ಯಗಳ ಚುನಾವಣಾ ಫಲಿತಾಂಶ ಪ್ರಕಟಗೊಂಡಿದೆ. ತೆಲಂಗಾಣ ಮತ್ತು ಮಿಝೋರಾಂ ಹೊರತುಪಡಿಸಿ ಇನ್ನುಳಿದ ರಾಜ್ಯಗಳ ಚುನಾವಣೆ ಪೂರ್ವ ಮತ್ತು ಚುನಾವಣೋತ್ತರ ಸಮೀಕ್ಷೆಗಳ ಫಲಿತಾಂಶ ಈ ಬಾರಿ ಸಂಪೂರ್ಣವಾಗಿ ತಲೆಕೆಳಗಾಗಿದೆ.

ಮೂರು ರಾಜ್ಯಗಳಲ್ಲಿ ಬಿಜೆಪಿ ಗೆದ್ದು ಬೀಗಿದ ನಂತರ ಗ್ಯಾರಂಟಿ ಒರಸೆ ಬದಲಾಗಿದೆ. ರಾಜ್ಯ ಮತ್ತು ರಾಷ್ಟ್ರೀಯ ಬಿಜೆಪಿ ನಾಯಕರೆಲ್ಲರೂ ಈ ಗೆಲುವನ್ನು ಸಂಭ್ರಮಿಸುವ ಜೊತೆಗೆ, ಜನ ಕಾಂಗ್ರೆಸ್ಸಿನ ಗ್ಯಾರಂಟಿಗಳಿಗೆ ಮಣೆ ಹಾಕದೆ, ಪ್ರಧಾನಿ ನರೇಂದ್ರ ಮೋದಿಯವರ ಗಟ್ಟಿ ನಾಯಕತ್ವ ಬಯಸಿದ್ದಾರೆ ಎನ್ನುವ ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಪ್ರತಿಪಕ್ಷ ನಾಯಕ ಆರ್ ಅಶೋಕ್ ಆದಿಯಾಗಿ ಅನೇಕ ನಾಯಕರು ಇದೇ ಧಾಟಿಯಲ್ಲಿ ತಮ್ಮ ಪ್ರತಿಕ್ರಿಯೆಯನ್ನು ನೀಡಿದ್ದಾರೆ. ಕರ್ನಾಟಕ ವಿಧಾನಸಭೆ ಚುನಾವಣೆ ಫಲಿತಾಂಶದ ನಂತರ, ಬಿಜೆಪಿ ನಾಯಕರು ತಮ್ಮ ಸೋಲಿಗೆ ಕಾಂಗ್ರೆಸ್ ಗ್ಯಾರಂಟಿಯೇ ಕಾರಣ ಎಂದು ಆರೋಪ ಮಾಡಿದ್ದರು. ಉಚಿತ ಕೊಡುಗೆಗಳನ್ನು ನೀಡಿ ಮತ ಸೆಳೆಯಲಾಗಿದೆ ಎಂದು ಆಪಾದಿಸಿತು.

ಕಾಂಗ್ರೆಸ್ ಸಹ ಅದೇ ಮಾದರಿಯನ್ನು ಅನುಸರಿಸಿ ಪಂಚ ರಾಜ್ಯಗಳ ಚುನಾವಣೆಯನ್ನು ಎದುರಿಸಿತು. ಆದರೆ ಫಲಿತಾಂಶ ವ್ಯತಿರಿಕ್ತವಾಗಿತ್ತು. ಬಿಜೆಪಿ ನಾಯಕರಿಗೆ ಆಗ ತಮ್ಮ ಸೋಲಿಗೆ ಉಚಿತ ಕೊಡುಗೆಗಳ ಕಾರಣ ಎಂದವರು, ಈಗ ನರೇಂದ್ರ ಮೋದಿ ನಾಯಕತ್ವಕ್ಕೆ ಜಯವಾಗಿದೆ ಎನ್ನುತ್ತಿದ್ದಾರೆ.

ಬಿಜೆಪಿ ನಾಯಕರ ಈಗಿನ ಹೇಳಿಕೆಗಳನ್ನ ಗಮನಿಸಿದರೆ ಕರ್ನಾಟಕದಲ್ಲಿ ಬಿಜೆಪಿ ಸೋಲಿಗೆ ಒಂದು ಜನ ಉಚಿತ ಕೊಡುಗೆಗಳಿಗೆ ಮಾರುಹೋಗಿರಬೇಕು. ಇಲ್ಲವೇ ಬಿಜೆಪಿಯ ದುರಾಡಳಿತಕ್ಕೆ ಬೇಸತ್ತಿರಬೇಕು. ಅಥವಾ ಪ್ರಧಾನಿ ನರೇಂದ್ರ ಮೋದಿಯ ನಾಯಕತ್ವ ಬೇಡವಾಗಿರಬೇಕು.

ಈ ಮೂರು ಕಾರಣಗಳನ್ನು ಬಿಟ್ಟು ಕರ್ನಾಟಕದಲ್ಲಿ ಬಿಜೆಪಿ ಸೋಲಿಗೆ ಮತ್ಯಾವಕಾರಣವು ಇಲ್ಲ. ಅದರಲ್ಲೂ ಬಿಜೆಪಿಯ ದುರಾಡಳಿತ ಜನವಿರೋಧಿ ನೀತಿ ಬಿಜೆಪಿ ಸೋಲಿಗೆ ಕಾರಣ ಎನ್ನುವುದನ್ನು ಬಿಜೆಪಿ ನಾಯಕರು ಈಗಲಾದರೂ ಒಪ್ಪಿಕೊಳ್ಳಬೇಕು. ಪಂಚರಾಜ್ಯ ಚುನಾವಣೆ ಫಲಿತಾಂಶದ ನಂತರವೂ ರಾಜ್ಯದ ಬಿಜೆಪಿ ನಾಯಕರು ಸತ್ಯವನ್ನ ಒಪ್ಪಿಕೊಳ್ಳದಿದ್ದರೆ ಆತ್ಮ ವಂಚನೆ ಮಾಡಿಕೊಂಡಂತೆ.

## ಬಸವೇಶ್ವರ ನಗರದಲ್ಲಿ ದಾನಮ್ಮಾ ದೇವಿ ಪುರಾಣ ಪ್ರವಚನದ ನಿಮಿತ್ತ ಲೇಖನ

# ಭಕ್ತರ ಆರಾಧ್ಯ ದೈವ ಗುಡ್ಡಾಪುರದ ದಾನಮ್ಮ ದೇವಿ

12ನೇ ಶತಮಾನದಲ್ಲಿ ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ, ಚನ್ನಬಸವಣ್ಣ ಮೊದಲಾದ ಅನೇಕ ಶರಣರು ವಚನ ಕ್ರಾಂತಿಯ ಮೂಲಕ ಸಮಾಜದಲ್ಲಿನ ಮೂಢನಂಬಿಕೆ, ಅಜ್ಞಾನಗಳ ಮೌಢ್ಯಗಳನ್ನು ಕಿತ್ತೊಗೆಯಲು ಹಲವಾರು ರೀತಿಯಲ್ಲಿ ಶ್ರಮಿಸಿದರು. 12ನೇ ಶತಮಾನದಲ್ಲಿ ರೂಪಿತವಾದ ಅನುಭವ ಮಂಟಪ ಇಂದಿಗೂ ಪ್ರಜಾಪ್ರಭುತ್ವದ ಸಂವಿಧಾನದ ರೂಪದಲ್ಲಿ ಶಾಶ್ವತವಾಗಿ ನೆಲೆ ನಿಂತಿದೆ.

12ನೇ ಶತಮಾನದಲ್ಲಿನ ಪ್ರಮುಖ ಶರಣರಲ್ಲಿ ಒಬ್ಬಳಾದ ಮಹಾ ಶರಣಿ ಲಿಂಗಮ್ಮಳಾಗಿ ಜನಿಸಿ ಬಸವಣ್ಣನವರಿಂದ ದಾನಮ್ಮಳೆಂಬ ಹೆಸರನ್ನು ಪಡೆದು ಲೋಕಖ್ಯಾತಿಯಾದ ಮಹಾ ಸಾಧ್ವಿಶಿರೋಮಣಿ ಶರಣೆ ಗುಡ್ಡಾಪೂರದ ದಾನಮ್ಮ. ದಾನಮ್ಮದೇವಿ ತಮ್ಮ ದಾನ-ಧರ್ಮದಿಂದ ಕೋಟ್ಯಾಂತರ ಜನರ ತಾಯಿಯಾಗಿ ಗುಡ್ಡಾಪೂರದಲ್ಲಿ ನೆಲೆಸಿದ್ದಾರೆ. ಮಹಾರಾಷ್ಟ್ರ ರಾಜ್ಯದ ಉಮರಾಣಿ ಎಂಬ ಹಳ್ಳಿಯಲ್ಲಿ ಅನಂತರಾಯ ಮತ್ತು ಶಿರಸಮ್ಮ ದಂಪತಿಗಳಿದ್ದರು. ಇವರ ವಿವಾಹವಾಗಿ ಸುಮಾರು ವರ್ಷಗಳ ನಂತರ ಈ ದಂಪತಿಗಳಿಗೆ ದೇವರ ಆಶೀರ್ವಾದದಿಂದ ಹೆಣ್ಣು ಮಗು ಜನಿಸಿತು, ಆ ಹೆಣ್ಣುಮಗುವಿಗೆ ಲಿಂಗಮ್ಮಳೆಂದು ನಾಮಕರಣ ಮಾಡುತ್ತಾರೆ.



ಲಿಂಗಮ್ಮ ಕಲ್ಯಾಣದ ಸಮೀಪ ಬಿಲ್ವವನದಲ್ಲಿ 21 ದಿನಗಳ ಕಾಲ ಬಡವರ ಸೇವೆ ಮಾಡುತ್ತಾ ಕಾಲ ಕಳೆಯುತ್ತಾಳೆ. ಬಸವಣ್ಣನವರು ಇವರ ಸೇವೆಯನ್ನು ಗಮನಿಸಿ, ಬೆರಗಾಗಿ ಸಂತಸಪಡುತ್ತಾರೆ. ನಂತರದಲ್ಲಿ ಲಿಂಗಮ್ಮ ಬಸವಣ್ಣನವರ ಮಹಾಮನೆಯನ್ನು ಪ್ರವೇಶಿಸಿ ಲಿಂಗಪೂಜೆಯೊಂದಿಗೆ ನಿತ್ಯ ಜಂಗಮರ ಸೇವೆಯನ್ನು ಮಾಡುತ್ತಾ ಕಾಯಕ ದಾಸೋಹದಲ್ಲೇ ಪರಮಾತ್ಮನನ್ನು ಕಾಣುತ್ತಾಳೆ. ಈ ಎಲ್ಲ ಕಾಯಕ ದಾಸೋಹವನ್ನು ಕಂಡ ಬಸವಣ್ಣನವರು ನೀನು ಕೇವಲ ಲಿಂಗಮ್ಮ ಅಲ್ಲ ದಾನ ಸ್ವರೂಪಿ, ದಾನದಾಸೋಹಿ, ದಾನೇಶ್ವರಿ ಎಂದು ಕೂಗಿ ಹೇಳುತ್ತಾರೆ. ಅಂದಿನಿಂದ ಈ ಲೋಕಕ್ಕೆ ದಾನ ದಾಸೋಹಿ ದಾನಮ್ಮ ದೇವಿ ಎಂದೇ ಲೋಕವಿಖ್ಯಾತಳಾಗುತ್ತಾಳೆ.

ಕರ್ನಾಟಕ ಮತ್ತು ಮಹಾರಾಷ್ಟ್ರದ ಭಕ್ತರಿಗೆ ಕನ್ನಡ ಮತ್ತು ಮರಾಠಿ ಸಂಸ್ಕೃತಿಯ ಸೌಹಾರ್ದದ ಸೇತುವೆಯಾಗಿದ್ದಾಳೆ. ಧರ್ಮ ರಕ್ಷಣೆಯಲ್ಲಿ ಗಣಾಚಾರಿಯಾಗಿ, ಶರಣರ ಧರ್ಮ, ವಚನ, ಆದರ್ಶ ಪ್ರಚಾರದಲ್ಲಿ ಜಂಗಮವಾಗಿ ಸಾವಿರಾರು ಜನರಿಗೆ ಲಿಂಗದೀಕ್ಷೆ ಕೊಟ್ಟ ಗುರುವಾಗಿ ಅವರ ಕುಲದೇವತೆಯಾಗಿ ದಾನದಲ್ಲಿ ದಾಸೋಹಿಯಾಗಿ ವರದಾನಿ ದಾನಮ್ಮಾ ಎಂದು ಕರೆಸಿಕೊಂಡು ಅಸಂಖ್ಯಾತ ಭಕ್ತರಿಂದ ಆರಾಧಿಸಲ್ಪಡುತ್ತಾಳೆ.

ಶರಣ ಸಂಸ್ಕೃತಿ-ಸಂಸ್ಕಾರದ ತವರೂರು ನಮ್ಮ ಗದಗ. ಇಲ್ಲಿನ ಬಸವೇಶ್ವರ ನಗರ ಈ ಓಣಿಯಲ್ಲಿ ವರ್ಷಪೂರ್ತಿ ವಿವಿಧ ಧಾರ್ಮಿಕ ಸಾಮಾಜಿಕ ಚಟುವಟಿಕೆಗಳು ತಲೆತಲಾಂತರದಿಂದಲೂ ನಡೆದು ಬಂದಿವೆ. ನಮ್ಮ ಹಿರಿಯರ ಕಾಲದಿಂದಲೂ ಓಣಿಯಲ್ಲಿ ಪುರಾಣ ಪ್ರವಚನಗಳಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದ್ದಾರೆ. ಪ್ರತಿ ವರ್ಷ ಕಾರ್ತಿಕ ಮಾಸದಲ್ಲಿ ಶರಣೆ ಗುಡ್ಡಪೂರ ದಾನಮ್ಮ ದೇವಿಯ ಪುರಾಣ ಪ್ರವಚನ ಕಾರ್ಯಕ್ರಮಗಳನ್ನು ಶ್ರೀ ವರದಾನೇಶ್ವರಿ ಮಹಿಳಾ ಮಂಡಳದ ಸದಸ್ಯೆಯರೆಲ್ಲಾ ಒಗ್ಗಟ್ಟಿನಿಂದ ಕಳೆದ 17 ವರ್ಷಗಳಿಂದ ಯಶಸ್ವಿಯಾಗಿ ನೆರವೇರಿಸಿಕೊಂಡು ಬಂದಿದ್ದಾರೆ. ಈ ಪುರಾಣ ಪ್ರವಚನ ಕಾರ್ಯಕ್ಕೆ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಧರ್ಮದರ್ಶಿಗಳು ಮತ್ತು ಇನ್ನಿತರ ಹಿರಿಯ ಮಹಿಳೆಯರು ಬಾಹುವಾಗಿ ನಿಂತು ಮಾರ್ಗದರ್ಶನನೀಡುತ್ತಾ ಬಂದಿದ್ದಾರೆ.

ಪ್ರತೀ ವರ್ಷದಂತೆ ಈ ವರ್ಷವೂ ಕೂಡ ಶರಣೆ ದಾನಮ್ಮ ತಾಯಿಯ 17ನೇ ವರ್ಷದ ಪುರಾಣ ಪ್ರವಚನ ಕಾರ್ಯಕ್ರಮ, ಶ್ರೀ ವೀರಭದ್ರೇಶ್ವರ ಕಾರ್ತಿಕೋತ್ಸವ, ಪಾಲಕಿಉತ್ಸವ ಮುಂತಾದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಾರೆ.

ಡಿ.4ರಿಂದ ಡಿ.12ರವರೆಗೆ ಸತತ 9 ದಿನಗಳ ಕಾಲ ನಡೆಯಲಿರುವ ಈ ಪುರಾಣ ಪ್ರವಚನದಲ್ಲಿ ಪಂಡಿತ ಪುಟ್ಟರಾಜ ಕವಿಗವಾಯಿಗಳವರ ಶಿಷ್ಯರಾದ ಶ್ರೀ. ಪಂಡಿತ ಕಲ್ಲಿನಾಥಶಾಸ್ತ್ರೀ ಅಡ್ನೂರ ಶ್ರೀವೀರೇಶ್ವರ ಪುಣ್ಯಾಶ್ರಮ ಇವರ ದಿವ್ಯಕಂಠದಿಂದ ಪ್ರವಚನ ನಡೆಯಲಿದೆ. ಸಂಗೀತ ಸೇವೆಯನ್ನು ಶ್ರೀಮೃತ್ಯುಂಜಯ ಹಿರೇಮಠ, ತಬಲಾ ಸೇವೆಯನ್ನು ಶ್ರೀ ಹೇಮಂತಕುಮಾರ ಹಿರೇಮಠ ಇವರು ನಡೆಸಿಕೊಡಲಿದ್ದಾರೆ.

ಡಿ.7ರಂದು ದಾನಮ್ಮಾ ತಾಯಿಯ ತೊಟ್ಟಿಲೋತ್ಸವ, ಡಿ.10ರಂದು ಶರಣೆ ದಾನಮ್ಮಾ ತಾಯಿ ಹಾಗೂ ಸೋಮಲಿಂಗರ ವಿವಾಹಮಹೋತ್ಸವ, ಡಿ.12ರಂದು ಪಲ್ಲಕ್ಕಿ ಉತ್ಸವ ಮತ್ತು ಕುಂಭಮೇಳ ಈ ಎಲ್ಲ ಕಾರ್ಯಕ್ರಮಗಳು ಒಂದೇ ವೇದಿಯಲ್ಲಿ ಪರಮ ಪೂಜ್ಯರ ಸಮ್ಮುಖದಲ್ಲಿ ನಡೆಯಲಿದ್ದು, ಈ ಎಲ್ಲ ಕಾರ್ಯಕ್ರಮಗಳಿಗೆ ನಗರದ ಮತ್ತು ಓಣಿಯ ಸದ್ಭಕ್ತರು ಆಗಮಿಸಿ ಯಶಸ್ವಿಗೊಳಿಸಿ ತಾಯಿಯ ಕೃಪೆಗೆ ಪಾತ್ರರಾಗೋಣ.



**- ಜ್ಯೋತಿ ಶಂಕರ್ ಹೇರಲಗಿ.**
ಶಿಕ್ಷಕರು, ಬಸವೇಶ್ವರ ನಗರ,
ಗದಗ.

# ಸರ್ಕಾರದ ಯೋಜನೆಗಳ ಸದುಪಯೋಗವಾಗಲಿ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ತಾಲೂಕಿನ ಬೂದಗುಂಪ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸರ್ಕಾರದ ಯೋಜನೆಯಡಿಯಲ್ಲಿ ಮಕ್ಕಳಿಗೆ ಶೂ-ಸಾಕ್ಸ್‌ಗಳನ್ನು ವಿತರಿಸಲಾಯಿತು.

ಎಸ್‌ಡಿಎಂಸಿ ಅಧ್ಯಕ್ಷ ಗೋವಿಂದರಾಜ್ ಬೂದಗುಂಪ ಮಾತನಾಡಿ, ಮಕ್ಕಳಿಗೆ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ. ಕನ್ನಡ ಶಾಲೆಗಳು ಸರ್ಕಾರದಿಂದ ಸಾಕಷ್ಟು ಯೋಜನೆಗಳನ್ನು ಪಡೆಯುತ್ತವೆ. ಮಕ್ಕಳು ಈ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಎಸ್‌ಡಿಎಂಸಿ ವತಿಯಿಂದ ಶಾಲೆಗೆ ಅಗತ್ಯವಿದ್ದ ಧ್ವನಿವರ್ಧಕವನ್ನು ನೀಡಲಾಯಿತು. ಎಸ್‌ಡಿಎಂಸಿ ಪದಾಧಿಕಾರಿಗಳು, ಶಾಲೆಯ ಮುಖ್ಯ ಗುರುಗಳು, ಶಿಕ್ಷಕ ವೃಂದದವರು ಹಾಜರಿದ್ದರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಡಿ. 6ರಂದು ನಡೆಯಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ 97ನೇ ಪರಿನಿಬ್ಬಾಣ ಅಂಗವಾಗಿ ತೆರಳಲಿರುವ ಯಾತ್ರೆಗೆ ಬಹುಜನ ಸಮಾಜ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಬಿಎಸ್‌ಪಿ ಕಾರ್ಯಕರ್ತರು ಹಾಗೂ ಡಾ. ಬಿ.ಆರ್. ಅಂಬೇಡ್ಕರ ಅಭಿಮಾನಿಗಳನ್ನು ಬಿಎಸ್‌ಪಿ ಗದಗ ಜಿಲ್ಲಾಧ್ಯಕ್ಷ ಡಿ.ಎಸ್. ಕಟ್ಟಿಮನಿಯವರು ಸೋಮವಾರ ಬೀಳ್ಕೊಟ್ಟರು.

## 'ಮೌನಸಾಧಕಿ' ಕೃತಿ ಲೋಕಾರ್ಪಣೆಗೊಳಿಸಿದ ಡಾ.ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯರು

# ಸಮಾಜಮುಖಿ ಕಾರ್ಯಗಳಿಂದ ಸಾರ್ಥಕತೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭೂಮಿ ಮೇಲೆ ಜನ್ಮತಾಳಿದ ಪ್ರತಿಯೊಬ್ಬ ವ್ಯಕ್ತಿ ತನಗಾಗಿ ಅಷ್ಟೇ ಅಲ್ಲದೆ, ಸಮಾಜೋಪಯೋಗಿ ಕಾರ್ಯದ ಮೂಲಕ ಜೀವನ ಸಾರ್ಥಕತೆ ಹೊಂದಬೇಕು ಎಂದು ಗಂಜಿಗಟ್ಟಿ ಚರಮೂರ್ತೇಶ್ವರಮಠದ ಡಾ.ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯರು ನುಡಿದರು.

ಅವರು ಪಟ್ಟಣದ ಉಮಾವಿದ್ಯಾಲಯದಲ್ಲಿ ವರಕವಿ ಡಾ. ದ.ರಾಬೇಂದ್ರೆ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ರಾಮಗಿರಿ ಮತ್ತು ಪ್ರಜ್ಞಾವಿಕಾಸ ಚಿಂತನಶೀಲ ಅಕಾಡೆಮಿ ಆಶ್ರಯದಲ್ಲಿ ಸಾಹಿತಿ ಡಾ. ಸಂಗಮೇಶ ತಮ್ಮನಗೌಡರ ಅವರ 110ನೇ ಕೃತಿ 'ಮೌನಸಾಧಕಿ' ಬಿಡುಗಡೆಗೊಳಿಸಿ ಮಾತನಾಡಿದರು.

ಎಲೆಮರೆಯ ಕಾಯಿಯಂತೆ ತಮ್ಮ ಸಾತ್ವಿಕ ಜೀವನದುದಕ್ಕೂ ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ಆಧ್ಯಾತ್ಮಿಕ, ಕ್ರೀಡೆ, ಕಲೆ, ಸಾಹಿತ್ಯ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವವರಲ್ಲಿ ಬಟ್ಟೂರಿನ ಗುರುಬಾಯಿ ಅಮರಪ್ಪ ಹುಲಸೂರ ಓರ್ವರಾಗಿದ್ದಾರೆ. ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಇಂತಹ ಸಾತ್ವಿಕ ಸಾಧಕಿಯ ಕೃತಿ ರಚನೆ ಮಾಡಿರುವುದು ಯೋಗ್ಯ ವಿಚಾರವಾಗಿದೆ ಎಂದರು.



ಗದುಗಿನ ಓಂಕಾರೇಶ್ವರ ಹಿರೇಮಠದ ಶ್ರೀ ಫಕೀರೇಶ್ವರ ಮಹಾಸ್ವಾಮಿಗಳು ಮಾತನಾಡಿ, ಉತ್ತಮ ಗ್ರಂಥಗಳು ಉತ್ತಮವಾದ ಸಂದೇಶವನ್ನೇ ಕೊಡುತ್ತವೆ. ಮೌನಸಾಧಕಿ ಕೃತಿಯು ಅತ್ಯುತ್ತಮ ಗ್ರಂಥಗಳ ಸಾಲಿನಲ್ಲಿ ಸೇರುತ್ತದೆ ಎಂದು ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವೇದಿಕೆಗಳ ಸಂಸ್ಥಾಪಕ ಅಧ್ಯಕ್ಷ ಡಾ. ಸಂಗಮೇಶ ತಮ್ಮನಗೌಡ್ರ ಮಾತನಾಡಿ, ಗುರುಬಾಯಿ ಹುಲಸೂರ ಅವರು 34 ವರ್ಷಗಳ ಕಾಲ ಶಿಕ್ಷಕ ವೃತ್ತಿಯನ್ನು ನಿರ್ವಹಿಸುವುದರೊಂದಿಗೆ, ಯಾವುದೇ ಪ್ರಚಾರವಿಲ್ಲದೇ ಇತರ ಸಮಾಜಮುಖಿ ಕೆಲಸಗಳನ್ನು ಮಾಡುತ್ತ ಒಬ್ಬ ಆದರ್ಶ ಗುರುಮಾತೆಯರಾಗಿದ್ದಾರೆ ಎಂದರು.

ಸಾಹಿತಿಗಳಾದ ಕೊತ್ತಲ ಮಹದೇವಪ್ಪ, ಸಿ.ಜಿ. ಹಿರೇಮಠ, ಸುಭಾಷ ಪೂಜಾರ, ಎಮ್.ಎಸ್. ಕಾಳೆ ಮತ್ತು ಪೂರ್ಣಾಜಿ ಖರಾಟೆ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಗುರುಬಾಯಿ ಹುಲಸೂರ ಮತ್ತು ಸಾಹಿತಿ ತಮ್ಮನಗೌಡ್ರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಸವರಾಜ ವಾರಿ, ಶಂಕ್ರಪ್ಪ ಶಿಳ್ಳಿನ, ಎನ್.ಎಸ್. ಗೊರವರ, ಎನ್.ಆರ್. ಸಾತಪೂತೆ ಚನಬಸಪ್ಪ ಹೂಗಾರ, ಎಮ್.ಎಸ್. ಹಿರೇಮಠ, ಜಾಕೀರ ಲಕ್ಷ್ಮೇಶ್ವರ, ಎಚ್.ಜಿ. ದುರ್ಗಣ್ಣವರ, ಎಸ್.ವಿ. ಸೋಗಿ, ರಾಜಶೇಖರಯ್ಯ ಕಲ್ಮಠ, ಮಂಜುಳಾ ಮೇಟಿ, ರೇಣುಕಾ ಚೌಕನವರು ಕುಸುಮಾ ಗಿಡ್ಡಮಲ್ಲನವರ, ಮಧುಮತಿ ಹರಿಜನ, ಕೆ.ಪಿ. ಕಂಬಾಳಿ, ಜಿ.ಎಸ್. ಜಗಲಿ, ಪ್ರೇಮಾ ಮುಳಗುಂದ, ಶೋಭಾ ಮುಳಗುಂದ ಅಫ್ರೀನಾ ನದಾಫ ಮುಂತಾದವರು ಹಾಜರಿದ್ದರು. ಎನ್.ಎನ್. ಸಾವಿರಕುರಿ ನಿರೂಪಿಸಿದರು.

# ನೀಲೂರು ರಾಚೋಟೇಶ್ವರ ಹಿರೇಮಠಕ್ಕೆ ನೂತನ ಶ್ರೀಗಳ ನಿಯುಕ್ತಿ



**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಕಲಬುರ್ಗಿ ಜಿಲ್ಲೆ ಅಫಜಲಪುರ ತಾಲೂಕಿನ ಶ್ರೀಮದ್ರಂಭಾಪುರಿ ಶಾಖಾ ನೀಲೂರು ಶ್ರೀ ರಾಚೋಟೇಶ್ವರ ಹಿರೇಮಠಕ್ಕೆ ಪ್ರವಚನ ಪ್ರವೀಣ, ತಿಳುಗೊಳ ಹಿರೇಮಠದ ಶಿವಬಸವ ಎಂಬ ವಟುವನ್ನು ಸಕಲ ಸದ್ಭಕ್ತರ ಸದಾಶಯದಂತೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ನಿಯುಕ್ತಿಗೊಳಿಸಿದ್ದಾರೆ.

ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳ ಮುಂದಾಳತ್ವದಲ್ಲಿ ನೀಲೂರು ರಾಚೋಟೇಶ್ವರ ಹಿರೇಮಠದ ಶಿಷ್ಯ ಸದ್ಭಕ್ತರು ಆಗಮಿಸಿ ಲಿಂ. ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳ ಅಗಲಿಕೆಯಿಂದ ತೆರವಾದ ಸ್ಥಾನಕ್ಕೆ ನೂತನ ಶ್ರೀಗಳನ್ನು ನಿಯುಕ್ತಿಗೊಳಿಸಿ ಆಶೀರ್ವದಿಸಬೇಕೆಂಬ ಬೇಡಿಕೆಯನ್ನು ಮನ್ನಿಸಿ ಶ್ರೀ ರಂಭಾಪುರಿ ಜಗದ್ಗುರುಗಳು ಈ ನಿರ್ಧಾರ ಕೈಕೊಂಡರು.

ನಿಯುಕ್ತಿಗೊಳಿಸಿದ ಸಮಾರಂಭದಲ್ಲಿ ಅಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಯಂಕಂಚಿ ಹಿರೇಮಠದ ರುದ್ರಮುನಿ ಶಿವಾಚಾರ್ಯರು, ಮಳಲಿ ಮಠದ ಡಾ.ನಾಗಭೂಷಣ ಶಿವಾಚಾರ್ಯರು, ಅಗರಖೇಡದ ಪ್ರಭುಲಿಂಗ ಶ್ರೀಗಳು ನೀಲೂರು ಗ್ರಾಮದ ಹನಮಂತರಾಯಗೌಡ ಪಾಟೀಲ, ಶ್ರೀಮಂತರಾಯಗೌಡ ಪಾಟೀಲ, ಗುರುನಾಥ ಕೌಲಗಿ, ಶಾಂತಯ್ಯಸ್ವಾಮಿ ಮಠಪತಿ, ರಾಜಶೇಖರ ಪಾಟೀಲ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಮುಂಬರುವ ಶುಭ ಮುಹೂರ್ತದಲ್ಲಿ ನೂತನ ಶ್ರೀಗಳವರಿಗೆ ಅಧಿಕೃತವಾಗಿ ಶ್ರೀ ಗುರು ಪಟ್ಟಾಧಿಕಾರ ನೆರವೇರಿಸಲಾಗುವುದೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಪ್ರಕಟಿಸಿದರು.

# ಆನೆ ಹಾವಳಿ ನಿಯಂತ್ರಣ ಸಿಬ್ಬಂದಿಗೆ ಹೆಚ್ಚಿನ ತರಬೇತಿ: ಸಚಿವ ಖಂಡ್ರೆ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**



ರಾಜ್ಯದಲ್ಲಿ ಈಗಾಗಲೇ ಏಳು ಆನೆ ಕಾರ್ಯಪಡೆ ತಂಡಗಳನ್ನು ರಚಿಸಲಾಗಿದ್ದು, ಆನೆ ಹಿಡಿಯಲು ನಿಯೋಜಿಸಿರುವ ಸಿಬ್ಬಂದಿಗಳಿಗೆ ಹೆಚ್ಚಿನ ತರಬೇತಿ ನೀಡಲಾಗುವುದು ಎಂದು ಅರಣ್ಯ, ಜೈವಿಕ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು.

ವಿಧಾನಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯೆ ಡಾ.ತೇಜಸ್ವಿನಿ ಗೌಡ ಅವರು ಆನೆ ಹಾವಳಿ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆನೆಗಳು ಜನವಸತಿ ಪ್ರದೇಶಕ್ಕೆ ಬರುವುದನ್ನು ತಡೆಯಲು ಆನೆ ಕಂದಕ ನಿರ್ಮಾಣ, ರೇಲ್ವೆ ಬ್ಯಾರಿಕೇಡ್‌ಗಳ ಅಳವಡಿಕೆಯನ್ನು ಮಾಡಲಾಗುವುದು ಎಂದರು.

# ವಿವೇಕ ಯಾವಗಲ್ ಉಸ್ತುವಾರಿಯಾಗಿದ್ದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು

**■ವಿಜಯಸಾಕ್ಷಿ ಸುದ್ದಿ, ಗದಗ**



ಇತ್ತೀಚೆಗೆ ನಡೆದ ಪಂಚರಾಜ್ಯಗಳ ಚುನಾವಣೆಯಲ್ಲಿ ತೆಲಂಗಾಣ ರಾಜ್ಯ ಗೆಲ್ಲುವಲ್ಲಿ ಕಾಂಗ್ರೆಸ್ ಯಶಸ್ವಿಯಾಗಿದೆ. ಭಾರತೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ವಿವೇಕ್ ಯಾವಗಲ್ ಅವರು ತೆಲಂಗಾಣ ಚುನಾವಣಾ ಉಸ್ತುವಾರಿಯಾಗಿ ಕಾರ್ಯ ನಿರ್ವಹಿಸಿದ್ದ ಮೆಹಬೂಬ್ ನಗರ, ನಾಗರ್ ಕರ್ನೂಲ್, ಜಹೀರ್‌ಬಾದ್ ಈ ಮೂರು ಲೋಕಸಭಾ ಕ್ಷೇತ್ರಗಳ 21 ವಿಧಾನಸಭಾ ಕ್ಷೇತ್ರಗಳ 16 ಸ್ಥಾನಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದ್ದು, ನೂತನ ಶಾಸಕರು ಸೇರಿದಂತೆ ತೆಲಂಗಾಣ ಕಾಂಗ್ರೆಸ್ ಕಾರ್ಯಕರ್ತರು ವಿವೇಕ್ ಯಾವಗಲ್ ಅವರಿಗೆ ಧನ್ಯವಾದ ಸಲ್ಲಿಸಿ, ಹರ್ಷ ವ್ಯಕ್ತ ಪಡಿಸಿದ್ದಾರೆ.

# ಮಕ್ಕಳ ಆರೋಗ್ಯದ ಬಗ್ಗೆ ಪಾಲಕರು ಕಾಳಜಿ ವಹಿಸಿ



**■ವಿಜಯಸಾಕ್ಷಿ ಸುದ್ದಿ, ರೋಣ**

ಮಕ್ಕಳ ಆರೋಗ್ಯದ ಬಗ್ಗೆ ಪಾಲಕರು ಹೆಚ್ಚಿನ ಕಾಳಜಿ ವಹಿಸುವ ಮೂಲಕ ಅವರನ್ನು ಸದೃಢರನ್ನಾಗಿ ಬೆಳಸಬೇಕು ಎಂದು ಆರೋಗ್ಯ ಇಲಾಖೆಯ ಸಿಎಚ್‌ಒ ರಾಹುಲ್ ಜೈನ್ ಹೇಳಿದರು.

ಅವರು ಮಾರನಬಸರಿ ಗ್ರಾಮದ 284ನೇ ಅಂಗನವಾಡಿ ಕೇಂದ್ರದಲ್ಲಿ ಜರುಗಿದ ಆರೋಗ್ಯ ಶಿಶು ಪ್ರದರ್ಶನ ಹಾಗೂ ಮಕ್ಕಳ ಆರೋಗ್ಯ ತಪಾಸಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಚಿಕ್ಕವರಿದ್ದಾಗ ಹೆಚ್ಚಿನ ರಿತಿಯಲ್ಲಿ ತನ್ನ ಪಾಲಕರನ್ನು ಆವಲಂಬಿಸಿರುತ್ತಾರೆ. ಅಂಗನವಾಡಿ ಕೇಂದ್ರಗಳಲ್ಲಿ ನೀಡಲಾಗುವ ಪೌಷ್ಠಿಕ ಆಹಾರವನ್ನು ಬಳಕೆ ಮಾಡಿ ಮಕ್ಕಳ ಆರೋಗ್ಯವನ್ನು ಸದೃಢಗೊಳಿಸಬೇಕು ಎಂದರು.

ಗ್ರಾ.ಪಂ ಸದಸ್ಯೆ ದಿಲ್‌ಶ್ಯಾದ್ ದೋಟಿಹಾಳ ಮಾತನಾಡಿ, ಮಕ್ಕಳು ಆರೋಗ್ಯವಂತರಾದರೆ ಮಾತ್ರ ಸಮಾಜ ಹಾಗೂ ಸಮುದಾಯಗಳು ಆರೋಗ್ಯವಾಗಿರುತ್ತವೆ. ಈ ದಿಶೆಯಲ್ಲಿ ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸೇರಿದಂತೆ ಗ್ರಾ.ಪಂ ಆಡಳಿತ ಮಂಡಳಿಯೂ ಸಹ ಆರೋಗ್ಯ ಹಾಗೂ ಸ್ವಚ್ಛತೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುತ್ತಿರುವುದು ಸ್ವಾಗತಾರ್ಹವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಕ್ಕಳ ಪಾಲಕರಲ್ಲಿ ಆರೋಗ್ಯ ರಕ್ಷಣೆ ಕುರಿತು ಜಾಗೃತಿ ಮೂಡಿಸಲಾಯಿತು. ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಅಧ್ಯಕ್ಷತೆ ವಹಿಸಿದ್ದರು.

ಗ್ರಾ.ಪಂ ಉಪಾಧ್ಯಕ್ಷೆ ಮಂಜುಳಾ ಮಾದರ, ಸುವರ್ಣಾ ಹಲಗೇರಿ, ಬಿ.ವಾಯ್. ಅರಕೇರಿ, ಬಸಮ್ಮ ಅಂಗಡಿ, ಪದ್ಮಾ ಅಬ್ಬಿಗೇರಿ, ರತ್ನಾ ತಳವಾರ, ಸುಮಂಗಲಾ ವಣಗೇರಿ, ಗಂಗಮ್ಮ ಅಬ್ಬಿಗೇರಿ, ಫಮೀದಾ ಜಾಲಿಹಾಳ ಸೇರಿದಂತೆ ಪಾಲಕರು ಉಪಸ್ಥಿತರಿದ್ದರು.

# ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಆರಂಭ

▶▶ಮೊದಲನೇ ಪುಟದಿಂದ

ಮಾಜಿ ಶಾಸಕರುಗಳಾದ ಸಿ.ವೆಂಕಟೇಶಪ್ಪ, ಶ್ರೀಕಾಂತ್ ಶೆಟ್ಟಪ್ಪ ಭೀಮಣ್ಣವರ, ವಿಲಾಸಬಾಬು ಆಲಮೇಕರ್, ಈಶಾನ್ಯ ರಾಜ್ಯಗಳ ಮಾಜಿ ರಾಜ್ಯಪಾಲರಾಗಿದ್ದ ಪಿ.ಬಿ.ಆಚಾರ್ಯ ಅವರ ನಿಧನಕ್ಕೂ ಮುಖ್ಯಮಂತ್ರಿಗಳು ಸಂತಾಪ ಸೂಚಿಸಿದರು.

ಸಣ್ಣ ವಯಸ್ಸಿನಲ್ಲಿಯೇ ದೇಶ ಸೇವೆಗಾಗಿ ಪ್ರಾಣ ಅರ್ಪಿಸಿದ ಕ್ಯಾಪ್ಟನ್ ಎಂ.ವಿ. ಪ್ರಾಂಜಲ್‌ರ ತ್ಯಾಗ ದೊಡ್ಡದು. ಅವರ ಪಾರ್ಥಿವ ಶರೀರ ಬೆಂಗಳೂರಿಗೆ ಆಗಮಿಸಿದ ವೇಳೆ ಖುದ್ದು ಹಾಜರಾಗಿ ಗೌರವ ಸೂಚಿಸಿದೆ. ಇವರೊಂದಿಗೆ ಹುತಾತ್ಮರಾದ ಕ್ಯಾಪ್ಟನ್ ಶುಭಂ ಗುಪ್ತಾ, ಹವಲ್ದಾರ್ ಅಬ್ದುಲ್ ಮಜಿದ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಪಾರಾಟ್ರುಪರ್ ಸಚಿನ್ ಲಾರ್ ಅವರ ಆತ್ಮಗಳಿಗೂ ಶಾಂತಿ ದೊರಕಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಅಧ್ಯಕ್ಷರಾಗಿದ್ದ ಮಾಜಿ ರಾಜ್ಯಪಾಲ ಪಿ.ಬಿ. ಆಚಾರ್ಯ ಈಶಾನ್ಯ ರಾಜ್ಯಗಳಲ್ಲಿ ಶೈಕ್ಷಣಿಕ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಉಗ್ರರೊಂದಿಗೆ ದಿಟ್ಟತನದಿಂದ ಹೋರಾಡಿ ಹುತಾತ್ಮರಾದ ಕರ್ನಾಟಕದ ಕ್ಯಾಪ್ಟನ್ ಎಂ.ವಿ. ಪ್ರಾಂಜಲ್ ಹಾಗೂ ಅವರ ಸಹೋದ್ಯೋಗಿ ಯೋಧರ ತ್ಯಾಗವನ್ನು ದೇಶದ ಜನತೆ ಮರೆಯುವುದಿಲ್ಲ ಎಂದರು.

ಮಾಜಿ ಸಚಿವ ಶ್ರೀರಂಗದೇವರಾಯಲು, ಮಾಜಿ ಶಾಸಕರುಗಳಾದ ಸಿ.ವೆಂಕಟೇಶಪ್ಪ, ಶ್ರೀಕಾಂತ್ ಶೆಟ್ಟಪ್ಪ ಭೀಮಣ್ಣವರ, ವಿಲಾಸಬಾಬು ಆಲಮೇಕರ್ ಅವರು ಸಹ ಶಾಸಕರಾಗಿ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಸಂತಾಪ ಸೂಚನೆ ನಿರ್ಯಣದ ಮೇಲೆ ಗೃಹ ಸಚಿ ಡಾ. ಜಿ. ಪರಮೇಶ್ವರ್, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ಶಾಸಕರಾದ ಅರಗ ಜ್ಞಾನೇಂದ್ರ, ಎಚ್.ಕೆ. ಪಾಟೀಲ, ವಿಜಯೇಂದ್ರ, ಜನಾರ್ಧನ ರೆಡ್ಡಿ, ಬಸವರಾಜ ರಾಯರೆಡ್ಡಿ, ಬಿ.ಆರ್. ಪಾಟೀಲ್, ಶಾಸಕಿ ನಯನಾ ಮೋಟಮ್ಮ ಸೇರಿದಂತೆ ಇತರ ಶಾಸಕರು ಮಾತನಾಡಿದರು. ಮೃತರ ಗೌರವಾರ್ಥ ಸದನದಲ್ಲಿ ಒಂದು ನಿಮಿಷ ಮೌನಾಚರಣೆ ಆಚರಿಸಲಾಯಿತು.

## ಕಿತ್ತೂರ ರಾಣಿ ಚನ್ನಮ್ಮಳ ವಿಜಯೋತ್ಸವ, ಜಯಂತ್ಯುತ್ಸವ ಕಾರ್ಯಕ್ರಮ

# ರಾಣಿ ಚನ್ನಮ್ಮಳ ಶೌರ್ಯ ಅಜರಾಮರ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಈ ನಾಡಿನ ನೆಲ, ಜಲ, ಭಾಷೆ, ಸಂಸ್ಕೃತಿಯ ಉಳಿವಿಗಾಗಿ ವೀರರಾಣಿ ಕಿತ್ತೂರ ಚನ್ನಮ್ಮಳ ಧೈರ್ಯ, ಶೌರ್ಯ, ತ್ಯಾಗ, ಆಧ್ಯಾತ್ಮಿಕತೆಯನ್ನು ಇಂದಿನ ಮಹಿಳೆಯರು ಅಳವಡಿಸಿಕೊಳ್ಳುವುದು ಅವಶ್ಯವಾಗಿದೆ ಎಂದು ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಮಹಾಪೀಠದ ಬಸವ ಜಯಮೃತ್ಯಂಜಯ ಸ್ವಾಮಿಗಳು ಹೇಳಿದರು.

ಇಲ್ಲಿಯ ಲಿಂಗಾಯತ ಪಂಚಮಸಾಲಿ ಸಮಾಜ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಕಿತ್ತೂರ ರಾಣಿ ಚನ್ನಮ್ಮಳ 200ನೇ ವಿಜಯೋತ್ಸವ ಹಾಗು 245ನೇ ಜಯಂತ್ಯುತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬ್ರಿಟಿಷರ ಒಡೆದು ಆಳುವ ನೀತಿಯನ್ನು ಖಂಡಿಸಿದ್ದ ಚನ್ನಮ್ಮ ಯಾರೊಂದಿಗೂ ರಾಜಿ ಮಾಡಿಕೊಳ್ಳದೇ ಸ್ವಾಭಿಮಾನದಿಂದ ತನ್ನ ಸಂಸ್ಥಾನವನ್ನು ಉಳಿಸಿಕೊಳ್ಳಲು ಹೋರಾಟ ಮಾಡಿದ ಧೈರ್ಯಶಾಲಿ. ಈ ನಾಡಿನಲ್ಲಿ ಹೊಯ್ಸಳ, ಕದಂಬ, ಚಾಲುಕ್ಯರು, ವಿಜಯನಗರದ ಅರಸರು ಸೇರಿದಂತೆ 600 ಸಂಸ್ಥಾನಗಳಲ್ಲಿ ಮಹಿಳೆಯರು ಅಧಿಕ ಸಂಖ್ಯೆಯಲ್ಲಿ ಆಳಿದ್ದಾರೆ. ಆದರೆ ಚನ್ನಮ್ಮ ತನ್ನ ದತ್ತು ಪುತ್ರ ರಾಯಣ್ಣನೊಂದಿಗೆ ವೀರತ್ವ, ಶೌರತ್ವ, ಶ್ರದ್ಧೆಯ ಲಿಂಗಪೂಜೆಯೊಂದಿಗೆ ಬ್ರಿಟಿಷರ ವಿರುದ್ಧ ಸ್ವಾತಂತ್ರ್ಯದ ಕಹಳೆ ಊದಿದ ಪ್ರಥಮ ಮಹಿಳೆಯಾಗಿದ್ದು, ಇಂದಿಗೂ ಸಹ ಅವರ ಹೆಸರು ಅಮರವಾಗಿದೆ ಎಂದರು.



ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ನಮ್ಮ ಪಂಚಮಸಾಲಿ ಸಮಾಜದ ಮಗಳು ಕಿತ್ತೂರ ರಾಣಿ ಚನ್ನಮ್ಮಳ ಸ್ವಾಭಿಮಾನದ ಬದುಕು ನಮಗೆಲ್ಲಾ ದಾರಿದೀಪವಾಗಿದೆ. ಕೃಷಿಯನ್ನೇ ಅವಲಂಬಿಸಿರುವ ಪಂಚಮಸಾಲಿ ಸಮಾಜದ ಹಿರಿಯರು ಮಕ್ಕಳಿಗೆ ಸಂಸ್ಕಾರವನ್ನು ಕಲಿಸಬೇಕು. ವಿದ್ಯಾವಂತರನ್ನಾಗಿ ಮಾಡಬೇಕು. ಸಮಾಜದ ಯುವಕರು ಸರಕಾರದ ಶೈಕ್ಷಣಿಕ ಮತ್ತು ಉದ್ಯೋಗ ದೃಷ್ಟಿಯಿಂದ 2ಎ ಮೀಸಲಾತಿ ಪಡೆಯುವುದು ಅವಶ್ಯವಿದ್ದು, ನಮ್ಮ ಸರಕಾರದ ಅವಧಿಯಲ್ಲಿ ಮೀಸಲಾತಿ ಹೋರಾಟಕ್ಕೆ ಶ್ರೀಗಳಿಗೆ ಸಾಕಷ್ಟು ಬೆಂಬಲ ನೀಡಿದ್ದೇನೆ ಎಂದರು.

> ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿಗಾಗಿ ಹೋರಾಟ ಮುಂದುವರೆಯಲಿದ್ದು, ಬೆಳಗಾವಿಯಲ್ಲಿ ನಡೆಯುವ ಅಧಿವೇಶನದಲ್ಲಿ ಇಷ್ಟಲಿಂಗ ಪೂಜೆಯೊಂದಿಗೆ ಹೋರಾಟ ಮಾಡಲಾಗುವುದು. ಸಮಾಜ ಭಾಂದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿಸಿ, ಹೋರಾಟದಲ್ಲಿ ಪಾಲ್ಗೊಳ್ಳಬೇಕು.
>
> **– ಬಸವ ಜಯಮೃತ್ಯಂಜಯ ಶ್ರೀಗಳು.**
> ಲಿಂಗಾಯತ ಪಂಚಮಸಾಲಿ ಮಹಾಪೀಠ, ಕೂಡಲಸಂಗಮ.

ಪಕ್ಷಾತೀತ ಮತ್ತು ಜ್ಯಾತ್ಯಾತೀತವಾಗಿ 2ಎ ಮೀಸಲಾತಿಯನ್ನು ಪಡೆದುಕೊಳ್ಳಲು ಪಂಚಮಸಾಲಿ ಸಮಾಜವು ಒಗ್ಗಟ್ಟಾಗಿ ಹೋರಾಟ ಮಾಡಬೇಕಿದೆ ಎಂದು ರಾಜ್ಯ ಕಾಂಗ್ರೆಸ್ ಪಕ್ಷದ ಮಾಧ್ಯಮ ವಕ್ತಾರ ಸಂಗಮೇಶ ಕೊಳ್ಳಿ ಅಭಿಪ್ರಾಯ ವ್ಯಕ್ತಪಡಿಸಿದರು.

ದಾವಣಗೇರಿ ಪಂಚಮಸಾಲಿ ಸಮಾಜದ ಅಧ್ಯಕ್ಷ ಅಶೋಕ ಗೋಪನಾಳ, ಸಾಹಿತಿ ಮಹೇಶ ವಡ್ಡಿನ, ಗದಗ ತಾಲೂಕು ಕಸಾಪ ಅಧ್ಯಕ್ಷೆ ರೇಷ್ಮಾ ಅಂಗಡಿ ಮಾತನಾಡಿದರು. ಕೊತಬಾಳದ ಅರಣೋದಯ ಸಾಂಸ್ಕೃತಿಕ ಕಲಾ ತಂಡದಿಂದ ಜಾನಪದ ಕಾರ್ಯಕ್ರಮ ಜರುಗಿತು. ರಾಷ್ಟ್ರಮಟ್ಟದ ಯೋಗಪಟು ಪ್ರೀತಿ ಹಡಗಲಿಯ ಯೋಗ ಪ್ರದರ್ಶನ ಗಮನ ಸೆಳೆಯಿತು. ಲಿಂಗಾಯತ ಪಂಚಮಸಾಲಿ ಸಮಾಜದ ಅಧ್ಯಕ್ಷ ಬಸವರಾಜ ಯಲಿಶಿರುಂಜ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಬಿ. ಕಲಕೇರಿ, ಲಿಂಗದಾಳ ಗ್ರಾ.ಪಂ ಅಧ್ಯಕ್ಷ ಪ್ರದೀಪ ನವಲಗುಂದ, ವಸಂತ ಮೇಟಿ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಗದಗ ಜಿಲ್ಲಾ ಪಂಚಮಸಾಲಿ ಸಮಾಜದ ಅಧ್ಯಕ್ಷ ಅಯ್ಯಪ್ಪ ಅಂಗಡಿ ವೇದಿಕೆಯಲ್ಲಿದ್ದರು. ಶ್ವೇತಾ ಪವಾಡಶೆಟ್ಟರ ಪ್ರಾರ್ಥಿಸಿದರು.

ಗ್ರಾ.ಪಂ ಸದಸ್ಯೆ ಲಲಿತಾ ಗದಗಿನ ಸ್ವಾಗತಿಸಿದರು. ಗಾಯತ್ರಿ ಹಡಗಲಿ ನಿರೂಪಿಸಿದರು. ಮುತ್ತಪ್ಪ ನೋಟಗಾರ ವಂದಿಸಿದರು.

## ಪಂಚರಾಜ್ಯಗಳ ಚುನಾವಣಾ ಗೆಲುವಿಗೆ ಸಂಭ್ರಮ ಆಚರಿಸಿದ ಬಿಜೆಪಿ ಮುಖಂಡರು

# ಪ್ರಧಾನಿ ಮೋದಿಯವರ ಬಲ ಹೆಚ್ಚಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಸರ್ಕಾರದ ಉಚಿತ ಭಾಗ್ಯಗಳ ಸುಳ್ಳು ಭರವಸೆಗಳಿಗೆ ಜನತೆ ಮರುಳಾಗುವುದಿಲ್ಲ. ಈ ದೇಶದ ರಕ್ಷಣೆ, ಅಭಿವೃದ್ಧಿ, ಏಕತೆ, ಸರ್ವಜನಾಂಗದ ಬದುಕಿಗೆ ಭದ್ರತೆ ನೀಡುವುದು ಬಿಜೆಪಿ ಸರ್ಕಾರ ಎಂಬುದನ್ನು ಜನತೆ 4 ರಾಜ್ಯಗಳ ಚುನಾವಣೆಯಲ್ಲಿ ತಿಳಿಸಿದ್ದಾರೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಭಾನುವಾರ ಪಟ್ಟಣದ ಶಿಗ್ಲಿ ನಾಕಾದಲ್ಲಿ ಪಂಚರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಘೋಷಣೆಯಾದ 4 ರಾಜ್ಯಗಳ ಫಲಿತಾಂಶದಲ್ಲಿ 3 ರಾಜ್ಯಗಳಲ್ಲಿ ಬಿಜೆಪಿ ವಿಜಯ ಸಾಧಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರೊಂದಿಗೆ ಸಿಹಿ ಹಂಚಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿ ಮಾತನಾಡಿದರು.



ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಆರ್ಥಿಕ ದಿವಾಳಿಯಂಚಿಗೆ ತಳ್ಳಿದ್ದು, ಅಭಿವೃದ್ಧಿಗೆ ನಯಾಪೈಸೆ ಅನುದಾನ ನೀಡಿಲ್ಲ. ದೇಶಕ್ಕಾಗಿ ಹಗಲಿರುಳು ಶ್ರಮಿಸುತ್ತಿರುವ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರ ಕೈಗೆ ಮತ್ತೆ ಅಧಿಕಾರ ಕೊಡುವ ಪ್ರಾಮಾಣಿಕ ಕಾರ್ಯ ಮಾಡೋಣ ಎಂದರು.

ಮುಖಂಡ ಶರಣು ಅಂಗಡಿ ಮಾತನಾಡಿ, ಪಂಚರಾಜ್ಯಗಳ ಚುನಾವಣೆಯಲ್ಲಿ ಪಕ್ಷದ ಗೆಲುವು ಮುಂಬರುವ ಲೋಕಸಭಾ ಚುನಾವಣೆಗೆ ಮುನ್ನುಡಿಯಾಗಿದೆ. ಅಭಿವೃದ್ಧಿಗಾಗಿ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಎಲ್ಲ ಕ್ಷೇತ್ರಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುವ ಮೂಲಕ ಮತ್ತೊಮ್ಮೆ ನರೇಂದ್ರ ಮೋದಿ ಅವರ ಕೈ ಬಲಪಡಿಸೋಣ ಎಂದರು.

ಬಿಜೆಪಿ ಮುಖಂಡರಾದ ಗಂಗಾಧರ ಮೆಣಸಿನಕಾಯಿ, ದುಂಡೇಶ ಕೊಟಗಿ, ಸುನೀಲ ಮಹಾಂತಶೆಟ್ಟರ, ವಿಜಯಕುಮಾರ ಹತ್ತಿಕಾಳ, ಡಿ.ವೈ. ಹುನಗುಂದ, ಶಿವಣ್ಣ ಲಮಾಣಿ, ಪುಂಡಲೀಕ ಲಮಾಣಿ, ಟೋಪಣ್ಣ ಲಮಾಣಿ, ಥಾವರೆಪ್ಪ ಲಮಾಣಿ, ವಿಜಯ ಬೂದಿಹಾಳ, ಈರಣ್ಣ ಅಕ್ಕೂರ, ವಿಶಾಲ ಬಟಗುರ್ಕಿ, ವಿಜಯ ಮೆಕ್ಕಿ, ರಾಮು ನಾಯಕ್, ಗಿರೀಶ ಚೌರಡ್ಡಿ, ಸಂತೋಷ ಜಾವುರ, ಮಲ್ಲಿಕಾರ್ಜುನ ನೀರಾಲೋಟಿ, ಬಸವರಾಜ ಕಲ್ಲೂರ, ಭೀಮಣ್ಣ ಯಂಗಾಡಿ, ಆಕಾಶ ಸವದತ್ತಿ, ನಿಂಗಪ್ಪ ರಾಮಗೇರಿ, ಬಸವರಾಜ ಚಕ್ರಸಾಲಿ, ಹನುಮಂತ ಜಾಲಿಮರದ, ಮಂಜುನಾಥ ಬಸಾಪೂರ, ವಿನಯ ಪಾಟೀಲ, ಅಭಯ ಜೈನ್, ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

# ಮೋದಿ ನಾಯಕತ್ವಕ್ಕೆ ವಿಜಯಮಾಲೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚರಾಜ್ಯ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಯಶಸ್ಸು ಕಂಡಿದ್ದು, ಪ್ರಧಾನಿ ಮೋದಿಯವರ ನಾಯಕತ್ವಕ್ಕೆ ದೇಶದ ಜನರು ಮತ್ತೊಮ್ಮೆ ವಿಜಯಮಾಲೆ ತೊಡಿಸಿದ್ದಾರೆ. ಈ ಫಲಿತಾಂಶ ಮುಂಬರುವ ಲೋಕಸಭಾ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಶ್ರೇಷ್ಠ ನಾಯಕತ್ವ, ತಾತ್ವಿಕ ನೆಲೆಗಟ್ಟು ಹಾಗೂ ದೇಶಭಕ್ತಿಯಂಥ ಮೌಲ್ಯಗಳನ್ನು ಮರೆತು ಕೇವಲ ಉಚಿತ ಕೊಡುಗೆಗಳಿಂದ ಚುನಾವಣೆಗಳನ್ನು ಗೆಲ್ಲಬಹುದು ಎನ್ನುವ ಕಾಂಗ್ರೆಸ್‌ನ ಭ್ರಮೆಯನ್ನು ಈ ಫಲಿತಾಂಶ ನಾಶಮಾಡಿದೆ. ಮಧ್ಯಪ್ರದೇಶ, ರಾಜಸ್ಥಾನದಲ್ಲಿ ಕಾಂಗ್ರೆಸ್ ಸಂಪೂರ್ಣ ದಿವಾಳಿಯಾಗಿರುವುದಲ್ಲದೇ ಕಾಂಗ್ರೆಸ್ ಆಡಳಿತವೇ ಇದ್ದ ಛತ್ತೀಸ್‌ಗಢದಲ್ಲೂ ಕಮಲ ಅರಳಿರುವುದು ಬಿಜೆಪಿಯ ಪ್ರಶ್ನಾತೀತ ನಾಯಕತ್ವಕ್ಕೆ ಸಾಕ್ಷಿಯಾಗಿದೆ. ಲೋಕಸಭಾ ಚುನಾವಣೆಯಲ್ಲೂ ಬಿಜೆಪಿ ಜಯಭೇರಿ ಬಾರಿಸಲಿದ್ದು, ವಿಶೇಷವಾಗಿ ಕರ್ನಾಟಕದಲ್ಲಿ 25ಕ್ಕಿಂತಲೂ ಹೆಚ್ಚಿನ ಸ್ಥಾನಗಳನ್ನು ಗಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ವಿಕಲಚೇತನರಲ್ಲಿ ಆತ್ಮಸ್ಥೈರ್ಯ ಮೂಡಿಸುವ ಕಾರ್ಯವಾಗಲಿ

▶▶ಮೊದಲನೇ ಪುಟದಿಂದ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜರುಗಿದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಕಲಚೇತನರು ವಿಕಲತೆಯನ್ನು ಮೆಟ್ಟಿ ನಿಂತು ತಮ್ಮಲ್ಲಿ ಹುದುಗಿರುವ ಕಲೆಯನ್ನು ಪ್ರೋತ್ಸಾಹಿಸಬೇಕು. ವಿಕಲಚೇತನರನ್ನು ಇತರ ರೀತಿಯಿಂದ ಶಕ್ತನಾಗಿರುವವನು ಎಂದು ಜಗತ್ತು ಗುರುತಿಸುತ್ತಿದೆ. ವಿಕಲಚೇತನರು ಗಣಿತ, ಕಂಪ್ಯೂಟರ್ ಜ್ಞಾನ, ಸಂಗೀತ, ಸಾಹಿತ್ಯ, ಕಲೆ, ವಿವಿಧ ಹಂತದ ಸಮಾಜ ಸೇವೆಯಲ್ಲಿ ತಮ್ಮ ಶಕ್ತಿ ಹಾಗೂ ಯುಕ್ತಿಯಿಂದ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಸಮಸ್ಯೆಗಳು ಎಷ್ಟೇ ಬಂದರೂ ಸಾಧಿಸಿ ತೋರಿಸಬೇಕು ಎನ್ನುವ ಛಲ ವಿಕಲಚೇತನರಲ್ಲಿದ್ದರೆ ಅವರು ದೇಶಕ್ಕೆ ದೊಡ್ಡ ಆಸ್ತಿಯಾಗುತ್ತಾರೆ. ಜಿಲ್ಲೆಯ ಪಂಚಾಕ್ಷರಿ ಗವಾಯಿಗಳ ಆಶ್ರಮವು ಕಣ್ಣಿಲ್ಲದವರಿಗೆ ಬದುಕು ಕಟ್ಟಿಕೊಳ್ಳುವ ಕಾರ್ಯ ನಿರಂತರವಾಗಿ ಮಾಡುತ್ತಿದೆ. ವಿಕಲಚೇತನರ ಸೇವೆಯಲ್ಲಿ ಗದಗ ಜಿಲ್ಲೆ ಅಗ್ರ ಸ್ಥಾನದಲ್ಲಿರಬೇಕು. ಸರ್ಕಾರದ ಸೌಲಭ್ಯಗಳು ಅವರಿಗೆ ತಲುಪುವಲ್ಲಿ ಏನಾದರೂ ತೆ-ಯಂದರೆಯಾದರೆ ವಿಶೇಷ ಗಮನ ಹರಿಸಿ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದು ಸಚಿವರು ನುಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಮಾತನಾಡಿ,, 2016ರಲ್ಲಿ ಜಾರಿಗೆ ಬಂದ ವಿಕಲಾಂಗಚೇತನರ ಅಧಿನಿಯಮದಂತೆ, ವಿಕಲಾಂಗ ಚೇತನರ ಹಕ್ಕುಗಳ ಮೇಲೆ ಹೆಚ್ಚಿನ ಆದ್ಯತೆ ಕೊಡಲಾಗಿದೆ. ಸರ್ಕಾರದಿಂದ ವಿಕಲಚೇತನರಿಗೆ ಜಾರಿ ಮಾಡಿರುವ ವಿವಿಧ ಸೌಲಭ್ಯಗಳು ಅವರಿಗೆ ತ್ವರಿತಗತಿಯಲ್ಲಿ ದೊರಕುವಂತಾಗಬೇಕೆಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರನ್ನು ಸನ್ಮಾನಿಸಲಾಯಿತು. ವಿಕಲಚೇತನರಿಗಾಗಿ ಹಮ್ಮಿಕೊಂಡಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ವಿಕಲಚೇತನರಿಗೆ ಟ್ರೈಸಿಕಲ್, ವೀಲ್‌ಚೇರ್ ಸಾಧನ ಸಲಕರಣೆಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕ್ರಮ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ವಿಕಲಚೇತನರ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿರಹಟ್ಟಿ, ಮಾಗಡಿ ಗ್ರಾ.ಪಂ. ಸದಸ್ಯ ವೀರಯ್ಯ ಮಠಪತಿ, ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಕಡೆಮನಿ, ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳು, ವಿವಿಧ ವಿಕಲಚೇತನರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

ಸಂಗೀತಾ ಭರಮಗೌಡರ ಪ್ರಾರ್ಥಿಸಿದರು. ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಸ್ವಾಗತಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

## ಲಿಂ.ಗುರುಬಸವ ಸ್ವಾಮೀಜಿಗಳ ನುಡಿನಮನ ಕಾರ್ಯಕ್ರಮದಲ್ಲಿ ಎ.ಡಿ. ಕೋಲಕಾರ

# ಕನ್ನಡ ಸ್ವಾಮೀಜಿಗಳ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಲಿಂ.ಗುರುಬಸವ ಸ್ವಾಮೀಜಿ ಶಿರೂರ ಮಠ ಹಾಗೂ ಬೆಳಗಾವಿಯ ಚಿಂಚಲಿಯ ಸಿದ್ದರಾಮ ಮಠದ ಪೀಠಾಧಿಪತಿಗಳಾಗಿ ಕನ್ನಡ ನಾಡು-ನುಡಿಗೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿದ್ದಾರೆ ಎಂದು ಗಜೇಂದ್ರಗಡ ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಅಧ್ಯಕ್ಷ ಎ.ಡಿ. ಕೋಲಕಾರ ಹೇಳಿದರು.

ಪಟ್ಟಣದ ವಾಣಿಪೇಟೆಯ ಗವಿಸಿದ್ದೇಶ್ವರ ಮಠದಲ್ಲಿ ಕಸಾಪ ತಾಲೂಕು ಘಟಕದ ವತಿಯಿಂದ ಏರ್ಪಡಿಸಿದ್ದ ಲಿಂ.ಗುರುಬಸವ ಸ್ವಾಮೀಜಿಗಳ ನುಡಿನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗಜೇಂದ್ರಗಡದ ಬಸವ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಧ್ಯಕ್ಷ ಬಿ.ಎಸ್. ಶೀಲವಂತರ ಮಾತನಾಡಿ, ಲಿಂ.ಗುರುಬಸವ ಶ್ರೀಗಳ ಪಾಂಡಿತ್ಯವನ್ನು ಮೆಚ್ಚಿದ್ದ ಗದುಗಿನ ಲಿಂ.ತೋಂಟದ ಸಿದ್ದಲಿಂಗ ಶ್ರೀಗಳು ಶಿರೋಳದ ಮಠಕ್ಕೆ ಪೀಠಾಧಿಪತಿಯನ್ನಾಗಿ ನೇಮಿಸಿದರು.




ಶಿರೋಳ ಭಾಗದಲ್ಲಿ ರೊಟ್ಟಿ ಜಾತ್ರೆ ಮಾಡುವ ಮೂಲಕ ಶ್ರೀಗಳು ಸಾಮರಸ್ಯದ ಬೀಜ ಬಿತ್ತಿದ್ದರು. ನಂತರ ಬೆಳಗಾವಿಯ ಚಿಂಚಲಿ ಮಠದ ಪೀಠಾಧಿಪತಿಯಾದ ಮೇಲೆ ಮಠದಲ್ಲಿ ನಿತ್ಯವೂ ಶರಣ ಸಂಸ್ಕೃತಿಯ ಪ್ರಸಾರ ಮಾಡುವುದರ ಜೊತೆಗೆ ಗಡಿ ಭಾಗದಲ್ಲಿ ಕನ್ನಡ ಗುಡಿ ಕಟ್ಟುವ ಮೂಲಕ ಮಠವನ್ನು ಕನ್ನಡ ಮಠವನ್ನಾಗಿಸಿ ಕನ್ನಡ ಸ್ವಾಮೀಜಿ ಎನ್ನುವ ಕೀರ್ತಿಗೆ ಶ್ರೀಗಳು ಪಾತ್ರರಾಗಿದ್ದಾರೆ ಎಂದರು.

> ಲಿಂ.ಗುರುಬಸವ ಸ್ವಾಮೀಜಿಗಳ ಪೂರ್ವಾಶ್ರಮ ಗಜೇಂದ್ರಗಡ ಪಟ್ಟಣದ ಗೌಳಿ ಗಲ್ಲಿ. ಚಿಕ್ಕ ವಯಸ್ಸಿನಲ್ಲಿ ಪಟ್ಟಣದಲ್ಲಿಯೇ ಆಟವಾಡಿ ಬೆಳೆದ ಶ್ರೀಗಳು, ಗದುಗಿನ ತೋಂಟದ ಮಠದ ಲಿಂ.ಡಾ.ಸಿದ್ದಲಿಂಗ ಶ್ರೀಗಳ ಅಪ್ಪಣೆ ಮೇರೆಗೆ ಶಿರೂರ ಮಠದ ಪೀಠಾಧಿಪತಿಗಳಾಗಿ ಗುರುಬಸವ ಸ್ವಾಮೀಜಿಯಾಗಿ ಸಾಕಷ್ಟು ಕೆಲಸ ಮಾಡಿದ್ದಾರೆ. ನಂತರ ಬೆಳಗಾವಿ ಜಿಲ್ಲೆಯ ಚಿಂಚಲಿ ಮಠದ ಪೀಠಾಧಿಪತಿಯಾಗಿ ಅಲ್ಲಮಪ್ರಭು ಶ್ರೀಗಳಾಗಿ ಕನ್ನಡದ ಮಠ, ಕನ್ನಡದ ತೇರು ನಿರ್ಮಿಸಿ ಗಡಿನಾಡ ಕನ್ನಡದ ಸ್ವಾಮೀಜಿ ಎಂದೇ ಖ್ಯಾತಿ ಪಡೆದಿದ್ದರು. ಅವರು ಕನ್ನಡ ಕಟ್ಟುವ ಅನೇಕ ಕೆಲಸ ಮಾಡಿ, ನಾಡಿಗೆ ವಿಶಿಷ್ಟ ಕೊಡುಗೆ ನೀಡಿ ಆದರ್ಶಪ್ರಾಯರಾಗಿದ್ದಾರೆ.
>
> **– ಎ.ಡಿ. ಕೋಲಕಾರ.**

ಕಸಾಪ ಗಜೇಂದ್ರಗಡ ತಾಲೂಕಾಧ್ಯಕ್ಷ ಎ.ಪಿ. ಗಾಣಿಗೇರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಬಸಯ್ಯ ಕಲ್ಮಠ, ಮಹಾಂತೇಶ ಅಂಗಡಿ, ಬಿ.ವಿ. ಮುನವಳ್ಳಿ, ಬಸವರಾಜ ಕೊಟಗಿ, ಮಹಾಂತೇಶ ಕಡಗದ, ಬಿ.ಟಿ. ಹೊಸಮನಿ, ಎಸ್. ಎನ್. ಮಾಳಗಿ, ದಾವಲಸಾಬ ತಾಳಿಕೋಟಿ, ಸಂಗಮೇಶ ವಸ್ತ್ರದ, ಎಸ್.ಎಸ್. ನರೇಗಲ್ ಮುಂತಾದವರಿದ್ದರು.

## ನಿಧನ ವಾರ್ತೆ

### ದಾಧಾಬಾಯಿ ಯರಗುಡಿ



ಲಕ್ಕುಂಡಿ: ಇಲ್ಲಿಯ ತಾಡಪತ್ರಿ ಓಣಿಯ ನಿವಾಸಿ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ, ಅಂಜುಮನ್ ಏ ಇಸ್ಲಾಂ ಕಮಿಟಿ ಸಂಸ್ಥಾಪಕ ಅಧ್ಯಕ್ಷ ದಾಧಾಬಾಯಿಗೌಸ್ ಮೋದಿನಸಾಬ ಯರಗುಡಿ(89) ಸೋಮವಾರ ನಿಧನರಾದರು.

ಮೃತರು ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆಯು ಮಂಗಳವಾರ ಮುಂಜಾನೆ 9ಕ್ಕೆ ಗ್ರಾಮದಲ್ಲಿ ನೆರವೇರಲಿದೆ.

# ಚಳಿಗಾಲದ ಅಧಿವೇಶನ: ಅಗಲಿದ ಗಣ್ಯರಿಗೆ ಸಂತಾಪ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಕುಂದಾನಗರಿ ಬೆಳಗಾವಿಯ ಸುವರ್ಣಸೌಧದಲ್ಲಿ ಸೋಮವಾರ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಪ್ರಾರಂಭವಾಯಿತು. ಹಿರಿಯರ ಮನೆಯೆನಿಸಿರುವ ವಿಧಾನ ಪರಿಷತ್ತಿನಲ್ಲಿ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು.

ಇತ್ತೀಚೆಗೆ ನಿಧನರಾದ ರಾಜ್ಯ ವಿಧಾನಮಂಡಲದ ಎರಡೂ ಸದನಗಳ ಹಾಗೂ ಸಂಸತ್ತಿನ ಉಭಯ ಸದನಗಳ ಮಾಜಿ ಸದಸ್ಯರು, ಮಾಜಿ ಸಚಿವರು, ವಿಧಾನಸಭೆಯ ಮಾಜಿ ಸಭಾಧ್ಯಕ್ಷರಾಗಿದ್ದ ಡಿ.ಬಿ. ಚಂದ್ರೇಗೌಡ, ವಿ.ಪ ಮಾಜಿ ಸದಸ್ಯ ಬಿ.ಎಸ್. ವಿಶ್ವನಾಥ, ಹಿರಿಯ ವಿಜ್ಞಾನಿ ಪ್ರೊ. ಎಂ.ಆರ್. ಸತ್ಯನಾರಾಯಣರಾವ್, ಹಿರಿಯ ವಿಜ್ಞಾನಿ ಡಾ.ವಿ.ಎಸ್. ಅರುಣಾಚಲಂ, ಖ್ಯಾತ ಸಂಖ್ಯಾಶಾಸ್ತ್ರಜ್ಞ ಡಾ. ಕಲ್ಯಂಪುಡಿ ರಾಧಾಕೃಷ್ಣರಾವ್, ಹಸಿರುಕ್ರಾಂತಿಯ ಹರಿಕಾರ ಡಾ.ಎಂ.ಎಸ್. ಸ್ವಾಮಿನಾಥನ್, ಹಿರಿಯ ರಂಗಭೂಮಿ ಹಾಗೂ ಚಲನಚಿತ್ರ ನಟಿ ಮಮತಾ ಗುಡೂರ್, ಹಿರಿಯ ಲೇಖಕಿ ಡಾ. ಕಮಲಾ ಹೆಮ್ಮಿಗೆ, ಹಿರಿಯ ಪತ್ರಕರ್ತ ಜಿ.ಎನ್. ರಂಗನಾಥ ರಾವ್, ಹಿರಿಯ ಹಿಂದೂಸ್ತಾನಿ ಗಾಯಕ ಪ್ರೊ. ಹನುಮಣ್ಣ ನಾಯಕ ದೊರೆ ಅವರಿಗೆ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಂತಾಪ ಸೂಚನೆ ನಿರ್ಣಯ ಮಂಡಿಸಿದರು.

ಸಭಾನಾಯಕ ಎನ್.ಎಸ್. ಬೋಸರಾಜ ಸಂತಾಪ ಸೂಚಿಸಿ, ನಿರ್ಣಯ ಅನುಮೋದಿಸಿ ಅಗಲಿದ ಗಣ್ಯರ ಸಾಧನೆಗಳ ಮೇಲೆ ಬೆಳಕು ಚೆಲ್ಲಿದರು. ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ಗೌರವ ಸೂಚಿಸಿದರು. ಅಗಲಿದ ಗಣ್ಯರ ಗೌರವಾರ್ಥ ಒಂದು ನಿಮಿಷದ ಮೌನಾಚರಣೆ ಮಾಡಲಾಯಿತು.


## ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/GBUDA-LBPAS-00061/2023-24/CLU/598/823 ದಿನಾಂಕ:02.12.2023

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಬಸವರೆಡ್ಡಿ ಪಾಂಡಪ್ಪ ಹುಚ್ಚಣ್ಣವರ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ.ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ **14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಬಿಂಕದಕಟ್ಟಿ | 180/*/1 | 01ಎಕರೆ-34ಗುಂಟೆ | ಕೃಷಿ | ವಸತಿ ಉಪಯೋಗ |

ವಾ.ಸಾ.ಇ./ಗದಗ/342/
ದೇಶಪಾಂಡೆಪಬ್ಲಿಸಿಟಿ/2023-24

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ ಗದಗ-ಬೆಟಗೇರಿ

### ಹಿರೇಮಠದ ಜಾತ್ರಾ ಮಹೋತ್ಸವದ 3ನೇ ದಿನದ ಕಾರ್ಯಕ್ರಮದಲ್ಲಿ ಡಾ. ಶೇಖರ ಸಜ್ಜನರ

# ಹಿಂದೂ ಧರ್ಮದ ಅಳಿವು ಯಾರಿಂದಲೂ ಸಾಧ್ಯವಿಲ್ಲ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸುಮಾರು ಐದು ಸಾವಿರ ವರ್ಷಗಳಿಗಿಂತಲೂ ಹೆಚ್ಚಿನ ಇತಿಹಾಸ ಹೊಂದಿರುವ ಹಿಂದೂ ಧರ್ಮದ ಅಳಿವು ಯಾರಿಂದಲೂ ಸಾಧ್ಯವಿಲ್ಲ. ಹಿಂದೂ ಧರ್ಮಕ್ಕಿರುವ ಶ್ರೇಷ್ಠತೆ ಜಗತ್ತಿನ ಬೇರೆ ಯಾವ ಧರ್ಮಕ್ಕೂ ಇಲ್ಲ ಎಂದು ಮಾಹಿತಿ ಆಯೋಗದ ಮಾಜಿ ಆಯುಕ್ತ ಡಾ. ಶೇಖರ ಡಿ.ಸಜ್ಜನರ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ನಡೆಯುತ್ತಿರುವ ಹಿರೇಮಠದ ಜಾತ್ರಾ ಮಹೋತ್ಸವದ 3ನೇ ದಿನದ ಕಾರ್ಯಕ್ರಮದ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವೀರಶೈವ ಲಿಂಗಾಯತ ಧರ್ಮದ ಆದರ್ಶಗಳು ಆದರ್ಶಪ್ರಾಯವಾಗಿವೆ. ಈ ಜಗತ್ತಿಗೆ ಕಾಯಕ ಯೋಗದ ಕಲ್ಪನೆಯನ್ನು ನೀಡಿದವರು ಬಸವಣ್ಣನವರು. ಈ ತತ್ವದ ಮೇಲೆಯೇ ಇಂದು ಜಗತ್ತು ನಡೆದಿದೆ. ಹಿಂದೂ ಧರ್ಮವನ್ನು ಅಳಿಸಿ ಹಾಕಲು ಯಾರು ಎಷ್ಟೇ ಪ್ರಯತ್ನಿಸಿದರೂ ಅದು ತನ್ನ ಗಟ್ಟಿತನದಿಂದ ಇನ್ನಷ್ಟು, ಮತ್ತಷ್ಟು



ಪುಟಿದೇಳುತ್ತಿದೆ ಎಂದು ಸಜ್ಜನರ ತಿಳಿಸಿದರು.

ಮಹಿಳೆಯರು ಕೂಡ ಪುರುಷರಷ್ಟೇ ಸಮಾನರು ಎಂದು ಸಾರಿ ಅವರಿಗೂ ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ನೀಡಿದವರು ಬಸವಣ್ಣನವರು. ಭಾರತೀಯ ಸಂಸ್ಕೃತಿಗೂ, ಪಾಶ್ಚಾತ್ಯ ಸಂಸ್ಕೃತಿಗೂ ಅಜಗಜಾಂತರ ವ್ಯತ್ಯಾಸವಿದೆ. ಪಾಶ್ಚಾತ್ಯ ಸಂಸ್ಕೃತಿ ಭೋಗಕ್ಕೆ ಹೆಚ್ಚಿನ ಮಹತ್ವ ನೀಡಿದ್ದರೆ, ಭಾರತೀಯ ಸಂಸ್ಕೃತಿ ತ್ಯಾಗಕ್ಕೆ ಮತ್ತು ಭಕ್ತಿಗೆ ಹೆಚ್ಚಿನ ಮಹತ್ವ ನೀಡಿದೆ. ಇದರಿಂದಾಗಿ ಇಲ್ಲಿ ಸಂತರು, ತ್ಯಾಗಿಗಳು,

> ಸಾನ್ನಿಧ್ಯ ವಹಿಸಿದ್ದ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಮಹಿಳಾ ಮಣಿಗಳ ಸಾಲಿನಲ್ಲಿ ಉನ್ನತ ಸ್ಥಾನದಲ್ಲಿ ನಿಲ್ಲುವ ಹೇಮರೆಡ್ಡಿ ಮಲ್ಲಮ್ಮ ಸಾಧ್ವಿ ಶಿರೋಮಣಿ ಎಂದು ಹೆಸರಾದವಳು. ಅವಳ ಬದುಕು ಎಲ್ಲರಿಗೂ ದಾರಿದೀಪ. ಏನನ್ನೂ ಓದದ, ತನಗಾಗಿ ಏನನ್ನೂ ಬಯಸದ ಅವಳ ಬದುಕೇ ಒಂದು ಆದರ್ಶವಾಗಿತ್ತು. ಇಂದು ಅವಳ ತೊಟ್ಟಿಲೋತ್ಸವವನ್ನು ಎಲ್ಲರೂ ಸೇರಿ ಆಚರಿಸುತ್ತಿರುವುದು ಸಂತಸದ ವಿಷಯ ಎಂದರು.

ದಾರ್ಶನಿಕರು ಹೆಚ್ಚಿನ ಸಂಖ್ಯೆಯಲ್ಲಿ ಜನಿಸಿದ್ದಾರೆ. ಆದ್ದರಿಂದ ಭಾರತೀಯ ಸಂಸ್ಕೃತಿ ಜಗತ್ತಿನಲ್ಲಿ ಅತ್ಯಂತ ಹಿರಿಮೆಯನ್ನು ಹೊಂದಿದೆ ಎಂದು ಡಾ. ಶೇಖರ ಸಜ್ಜನರ ಅಭಿಪ್ರಾಯಪಟ್ಟರು.

ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಸಿದ್ಧಾಂತ ಶಿಖಾಮಣಿಯಲ್ಲಿನ ಶರಣ ಸ್ಥಲದ ಬಗ್ಗೆ ಉಪನ್ಯಾಸ ನೀಡಿ, ಸಂಸಾರದಲ್ಲಿದ್ದೂ ಶರಣರಾಗುವ ಬಗೆಯನ್ನು, ಜೀವನದ ಮೌಲ್ಯಗಳಿಗೆ ಶರಣು ಹೋಗಿ ನಾವು ಹೇಗೆ ನಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬಹುದು ಎಂಬುದರ ಬಗ್ಗೆ ಶರಣ ಸ್ಥಲ ನಮಗೆ ತಿಳಿಸಿಕೊಡುತ್ತದೆ. ಶರಣ ಸತಿ, ಲಿಂಗಪತಿ ಎಂಬುದು ಶರಣ ಸ್ಥಲದ ಮುಖ್ಯ ಸಿದ್ಧಾಂತವಾಗಿದೆ. ಸತಿಪತಿಗಳೊಂದಾದ ಭಕ್ತಿ ಹಿತವಪ್ಪುದು ಶಿವಂಗೆ ಎನ್ನುವ ಮಾತೂ ಸಹ ಶರಣಸ್ಥಲದ ಮಹತ್ವವನ್ನು ತಿಳಿಸುತ್ತದೆ ಎಂದು ಅವರು ವಿವರಿಸಿದರು.

ವೇದಿಕೆಯ ಮೇಲೆ ಡಾ. ಕೆ.ಬಿ. ಧನ್ನೂರ, ನ್ಯಾಯವಾದಿ ಬಿ.ಎ. ಹಳ್ಳಿಕೇರಿ ಉಪಸ್ಥಿತರಿದ್ದರು.

ಬಸವೇಶ ಜೋಳದ ನಿರೂಪಿಸಿದರು. ಡಾ. ಆರ್.ಕೆ. ಗಚ್ಚಿನಮಠ ಸ್ವಾಗತಿಸಿ, ಪರಿಚಯಿಸಿದರು. ಎಂ.ಕೆ. ಬೇವಿನಕಟ್ಟಿ ವಂದಿಸಿದರು.

## ನಾಳೆ ಡಾ. ಬಿ.ಆರ್. ಅಂಬೇಡ್ಕರವರ 67ನೇ ಮಹಾ ಪರಿನಿರ್ವಾಣ ದಿನ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಿ. ಆರ್. ಅಂಬೇಡ್ಕರವರ 67ನೇ ಮಹಾಪರಿನಿರ್ವಾಣ ದಿನ ಅಂಗವಾಗಿ ಗದಗ ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ. ಆರ್. ಅಂಬೇಡ್ಕರವರ ಪುತ್ಥಳಿಗೆ ಬೆಳಿಗ್ಗೆ 10 ಗಂಟೆಗೆ ಮಾಲಾರ್ಪಣೆ ಹಾಗೂ ಜಿಲ್ಲಾ ಆಡಳಿತ ಭವನದಲ್ಲಿರುವ ಆಡಿಟೋರಿಯಮ್ ಹಾಲ್‌ನಲ್ಲಿ ಮುಂಜಾನೆ 11 ಗಂಟೆಗೆ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಸಂಘಟನೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು, ಮತ್ತು ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಪೂಜಾ ಕಾರ್ಯಕ್ರಮಕ್ಕೆ ಹಾಜರಾಗಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಶುಚಿ' ಕಾರ್ಯಕ್ರಮದಡಿ ಸ್ಯಾನಿಟರಿ ಪ್ಯಾಡ್ ವಿತರಣೆಗೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಸ್ತ್ರೀಯರ ಋತುಸ್ರಾವದ ಶುಚಿತ್ವದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ 'ಶುಚಿ' ಕಾರ್ಯಕ್ರಮದಡಿ ವಿವಿಧ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. 40 ಕೋಟಿ ರೂ. ವೆಚ್ಚದಲ್ಲಿ ಸರಕಾರಿ ಹಾಗೂ ಸರಕಾರಿ ಅನುದಾನಿತ ಶಾಲಾ/ಕಾಲೇಜುಗಳ 10ರಿಂದ 18 ವಯೋಮಾನದ 19.30ಲಕ್ಷ ವಿದ್ಯಾರ್ಥಿನಿಯರಿಗೆ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿ ಸ್ಯಾನಿಟರಿ ನ್ಯಾಪ್‌ಕಿನ್ ಪ್ಯಾಡ್ ವಿತರಣೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ತಿಳಿಸಿದರು.

# ಕಪ್ಪತಗುಡ್ಡ ಪ್ರಕೃತಿ ಶಿಬಿರದ ಶಿಲಾನ್ಯಾಸ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ



**■ವಿಜಯಸಾಕ್ಷಿ ಸುದ್ದಿ, ಗದಗ**

ಅರಣ್ಯ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಅರಣ್ಯ ವಸತಿ ಹಾಗೂ ವಿಹಾರ ಧಾಮಗಳ ಸಂಸ್ಥೆ ಸಹಯೋಗದಲ್ಲಿ ಸೊರಟೂರು ಅರಣ್ಯ ಪ್ರದೇಶದಲ್ಲಿ ರವಿವಾರ ಕಪ್ಪತಗುಡ್ಡ ಪ್ರಕೃತಿ ಶಿಬಿರದ ಶಿಲಾನ್ಯಾಸವನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಮುಖಂಡರಾದ ಸುಜಾತಾ ದೊಡ್ಡಮನಿ, ಗುರಣ್ಣ ಬಳಗಾನೂರ, ಪ್ರಭು ಬುರಬುರೆ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸೇರಿದಂತೆ ಸ್ಥಳೀಯ ಮುಖಂಡರು, ನಾಗರಿಕರು ಇದ್ದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಿಕಾ ಬಾಜಪೇಯಿ, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಮನೋಜ ಕುಮಾರ ಹಾಜರಿದ್ದರು.

# ಬೈಕ್ ಸವಾರರನ್ನು ಸುಲಿಗೆ ಮಾಡಿದ್ದ ಆರೋಪಿತರಿಗೆ ಶಿಕ್ಷೆ ಪ್ರಕಟ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸಂಕನೂರಿಗೆ ಹೊರಟಿದ್ದ ಬೈಕ್ ಸವಾರರನ್ನು ನಿಲ್ಲಿಸಿ, ಹಲ್ಲೆ ನಡೆಸಿ, ಅವರ ಬಳಿಯಿದ್ದ ಮೊಬೈಲ್ ಹಾಗೂ ಹಣವನ್ನು ದೋಚಿದ್ದ ಆರೋಪಿಗಳಿಗೆ ನ್ಯಾಯಾಲಯವು ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ದೂರುದಾರ ಬಸವರಾಜಯ್ಯ ಘನಮಠದಯ್ಯ ಚೌಕಿಮಠ, ಇವರು 3-09-2016ರಂದು ಗದಗ ತಾಲೂಕಿನ ಕನಗಿನಹಾಳ ಗ್ರಾಮದಿಂದ ತನ್ನ ತಂಗಿಯ ಊರಾದ ಸಂಕನೂರಿಗೆ ಗೆಳೆಯ ಉಮೇಶನೊಂದಿಗೆ ತನ್ನ ಮೋಟರ್ ಸೈಕಲ್‌ನಲ್ಲಿ ನರೇಗಲ್ಲ-ನಿಡಗುಂದಿ ಮಾರ್ಗವಾಗಿ ಹೊರಟಿದ್ದರು. ಮುಂದೆ ಹೋಗುವ ಸಲುವಾಗಿ ಎದುರಿನಲ್ಲಿ ಹೋಗುತ್ತಿದ್ದ ಟ್ರ್ಯಾಕ್ಟರಿಗೆ ಹಾರ್ನ್ ಹಾಕಿದ್ದು, ಮುಂದಿನ ಟ್ರ್ಯಾಕ್ಟರ್‌ನಲ್ಲಿದ್ದ ವ್ಯಕ್ತಿ ಇಳಿದು, ಬೈಕ್‌ಗೆ ಕೈ ಮಾಡಿ ನಿಲ್ಲಿಸಿ, ದೂರುದಾರ ಹಾಗೂ ಜೊತೆಗಿದ್ದ ಉಮೇಶ ಇಬ್ಬರನ್ನೂ ಬೈಕ್‌ನಿಂದ



ಕೆಳಗೆ ದೂಡಿ, ಇನ್ನೂ 4 ಜನ ಕೂಡಿಕೊಂಡು ಹಲ್ಲೆ ನಡೆಸಿ, ಬಸವರಾಜಯ್ಯರ ಬಳಿಯಿದ್ದ 20 ಸಾವಿರ ರೂ. ನಗದು, 6 ಸಾವಿರ ರೂ. ಬೆಲೆಯ ಮೊಬೈಲ್, ಗೆಳೆಯ ಉಮೇಶನ ಬಳಿಯಿದ್ದ ಒಂದು ನೋಕಿಯಾ ಮೊಬೈಲ್ ಹಾಗೂ 200 ರೂ. ಹಣವನ್ನು ಸುಲಿಗೆ ಮಾಡಿದ್ದರು.

ಈ ಸಂಬಂಧ, ದೂರು ದಾಖಲಿಸಿಕೊಂಡ ನರೇಗಲ್ಲ ಪೊಲೀಸ್ ಠಾಣೆಯ ಮಹಿಳಾ ಪಿ.ಎಸ್.ಐ. ಮಂಜುಳಾ ಸದಾರಿಯವರ ಅಪರಾಧ 128/2016 ಕಲಂ: 395, 397 ಐ.ಪಿ.ಸಿ. ಪ್ರಕರಣ ದಾಖಲಿಸಿಕೊಂಡಿದ್ದರು.

ನಂತರ ಈ ಪ್ರಕರಣದ ತನಿಖೆಯನ್ನು ರೋಣ ವೃತ್ತದ ಸರ್ಕಲ್ ಪೊಲೀಸ್ ಇನ್ಸಪೆಕ್ಟರ್ ಎಸ್.ಎಸ್. ಬೀಳಗಿ ವಹಿಸಿಕೊಂಡು ಪ್ರಕಣದ ಮುಂದಿನ ತನಿಖೆಯನ್ನು ಕೈಗೊಂಡು, ಐವರು ಆರೋಪಿತರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು.

ವಿಚಾರಣೆ ನಡೆಸಿದ ಗದುಗಿನ ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಆರೋಪಿತರಿಗೆ ಒಟ್ಟು 10 ವರ್ಷ ಕಠಿಣ ಕಾರಾವಾಸ ಹಾಗೂ 17500 ರೂ.ಗಳ ದಂಡ ವಿಧಿಸಿ ತೀರ್ಪು ನೀಡಿದೆ. ಸದರಿ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರಕಾರಿ ಅಭಿಯೋಜಕಿ ಸವಿತಾ ಶಿಗ್ಲಿ ವಾದ ಮಂಡಿಸಿದ್ದರು.

ಪ್ರಕರಣವನ್ನು ಶೀಘ್ರವೇ ಬೇಧಿಸಿ ಕಾನೂನು ಕ್ರಮ ಜರುಗಿಸಿದ ಸರ್ಕಲ್ ಪೊಲೀಸ್ ಇನ್ಸಪೆಕ್ಟರ್ ಎಸ್.ಎಸ್. ಬೀಳಗಿ ಹಾಗೂ ನರೇಗಲ್ಲ ಪೊಲೀಸ್ ಠಾಣೆಯ ಸಿಬ್ಬಂದಿಗಳ ಕಾರ್ಯಾಚರಣೆಯನ್ನು ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಶ್ಲಾಘಿಸಲಾಗಿದೆ.

### 'ಪ್ರಜಾರಾಜ್ಯೋತ್ಸವ ಹೆಲ್ತ್ ಕಪ್' ಕ್ರಿಕೆಟ್ ಲೀಗ್ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಕ್ರೀಡೆಗಳಿಂದ ದೈಹಿಕ ಸಾಮರ್ಥ್ಯ ಹೆಚ್ಚಳ

**■ವಿಜಯಸಾಕ್ಷಿ ಸುದ್ದಿ, ಗದಗ**

ನೌಕರರು ಕ್ರೀಡೆಗಳಲ್ಲಿ ಆಸಕ್ತಿ ಹೊಂದುವಂತೆ ಕ್ರಿಕೆಟ್ ಟೂರ್ನಿಯನ್ನು ಆಯೋಜಿಸಿದ್ದು, ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ಹೆಚ್ಚಿಸುತ್ತವೆ ಎಂದು ಕಾನೂನು, ನ್ಯಾಯ, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ನುಡಿದರು.



ಅವರು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಾಧಿಕಾರಿಗಳ ಸಂಘದಿಂದ ಪ್ರಜಾರಾಜ್ಯೋತ್ಸವ ಅಂಗವಾಗಿ ಏರ್ಪಡಿಸಿದ್ದ 'ಪ್ರಜಾರಾಜ್ಯೋತ್ಸವ ಹೆಲ್ತ್ ಕಪ್' ಕ್ರಿಕೆಟ್ ಲೀಗ್ ಟೂರ್ನಮೆಂಟ್-2 ಉದ್ಘಾಟಿಸಿ ಮಾತನಾಡಿದರು.

ಸಂಘದ ಜಿಲ್ಲಾ ಹಿರಿಯ ಉಪಾಧ್ಯಕ್ಷ ಸಿದ್ದಪ್ಪ.ಎನ್. ಲಿಂಗದಾಳ ಮಾತನಾಡಿ, ಗದಗ ಜಿಲ್ಲೆಯ ಕ್ರಿಕೆಟ್ ಟೂರ್ನಾಮೆಂಟ್‌ನಂತೆಯೇ ರಾಜ್ಯದೆಲ್ಲೆಡೆ ಆಯೋಜನೆ ಮಾಡುತ್ತಿರುವುದು ಸಂತೋಷ ದಾಯಕ ವಿಚಾರವಾಗಿದೆ. ನಾವು ಕ್ರಿಕೆಟ್ ಜೊತೆಗೆ ಕರ್ತವ್ಯದಲ್ಲಿಯೂ ಸಾಧನೆ ಮಾಡಿ, ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಲು ಪ್ರಮಾಣಿಕವಾಗಿ ಪ್ರಯತ್ನಿಸೋಣ ಎಂದರು.

ವಿ.ಪ. ಸದಸ್ಯ ಎಸ್.ವಿ. ಸಂಕನೂರ ಸಮವಸ್ತ್ರ ಮತ್ತು ಪಾರಿತೋಷಕ ಅನಾವರಣಗೊಳಿಸಿದರು. ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ, ಸಂಘದ ಜಿಲ್ಲಾ ಖಜಾಂಚಿ ಸತೀಶ್ ಕಟ್ಟಿಮನಿ ಮಾತನಾಡಿ ಪಂದ್ಯಾವಳಿಗೆ ಶುಭಕೋರಿದರು.

> ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ನಿರ್ಣಾಯಕರ ನಿರ್ಣಯವನ್ನು ಗೌರವಿಸಿದಾಗ ಪಂದ್ಯಾವಳಿ ಯಶಸ್ವಿಯಾಗಿ ನಡೆಯಲು ಸಾಧ್ಯ. ಆಟಗಾರರನ್ನು ಪ್ರೋತ್ಸಾಹಿಸಲು ಆರೋಗ್ಯ ಇಲಾಖೆಯ ಪ್ರತಿಯೊಬ್ಬರೂ ಮೈದಾನಕ್ಕೆ ಒಂದು ಕ್ರಿಕೆಟ್ ನೋಡಿ ಆನಂದಿಸಿ, ಪಂದ್ಯಾವಳಿಯನ್ನು ಯಶಸ್ವಿಗೊಳಿಸಿ ಎಂದರು.

ವೇದಿಕೆಯ ಮೇಲೆ ಸಂಘದ ಗದಗ ಜಿಲ್ಲಾಧ್ಯಕ್ಷ ರವಿ ಗುಂಜೀಕರ, ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ಆರ್.ಸಿ. ಬಸರಿಗಿಡದ, ಡಾ. ರಾಜೇಶ ಟಿ.ಎಸ್., ಸಂಘದ ರಾಜ್ಯ ಪರಿಷತ್ ಸದಸ್ಯ ಮಲ್ಲಿಕಾರ್ಜುನ ಕಲಕಂಬಿ, ಮಹಾಸಂಘದ ಅಧ್ಯಕ್ಷ ಹೇಮನಗೌಡ ಪಾಟೀಲ, ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅಜಯಕುಮಾರ ಕಲಾಲ, ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷ ಬಿ.ಸಿ. ಹಿರೇಹಾಳ, ಡಾ.ಜಯಕುಮಾರ ಬ್ಯಾಳಿ, ವಿಜಯ ಮುಳಗುಂದ, ಏಕನಾಥ ಗೌಡ ಪಾಟೀಲ, ಕೆ.ವಿ. ಬಡಿಗೇರ, ಪ್ರಭು ಹೊನಗುಡಿ, ಎನ್.ಎನ್. ಪಾಟೀಲ, ಸಾಮೂಲ ಕರಡಿಗುಡ್ಡ, ಎಂ.ಬಿ. ಹೆಬ್ಬಾಳ, ಆರ್.ಸಿ. ಉಪ್ಪಾರ ದೊಡ್ಡಮನಿ, ಎನ್.ಎನ್. ಪಾಟೀಲ, ಬಸವರಾಜ ಸೋಮಗೊಂಡ ಇದ್ದರು. ಬಿ.ಸಿ. ಹಿರೇಹಾಳ ಸ್ವಾಗತಿಸಿದರು. ಎಸ್. ಎಸ್. ಕುಬಸದ, ಪ್ರಭು ಹಾದಿಮನಿ ನಿರೂಪಿಸಿದರು. ಕೆ.ವಿ. ಬಡಿಗೇರ ವಂದಿಸಿದರು.

## ಕಲ್ಯಾಣ ಕರ್ನಾಟಕ ಶಿಕ್ಷಕರ ನೇಮಕಾತಿಗೆ ಕ್ರಮ: ಸಚಿವ ಮಧು ಬಂಗಾರಪ್ಪ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**



ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಾಲಾ ಶಿಕ್ಷಕರ ಕೊರತೆಯನ್ನು ತುಂಬುವುದರೊಂದಿಗೆ ಈ ಭಾಗದ ಶಾಲೆಗಳಿಗೆ ಅಗತ್ಯವಿರುವ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಆದ್ಯತೆಯ ಮೇರೆಗೆ ಒದಗಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಶಶೀಲ್ ನಮೋಶಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಾಲಾ ಶಿಕ್ಷಣ ಆಯುಕ್ತಾಲಯದಲ್ಲಿ ಹಲವು ವರ್ಷಗಳಿಂದ ಬೀಡು ಬಿಟ್ಟಿರುವ ಸಿಬ್ಬಂದಿಗಳ ವರ್ಗಾವಣೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದ ಪ್ರಾಥಮಿಕ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕ ಕುರಿತಂತೆ ಸದಸ್ಯ ಎಸ್.ವಿ. ಸಂಕನೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಎಸ್.ಮಧು ಬಂಗಾರಪ್ಪ, ಪ್ರಾಥಮಿಕ ಶಾಲಾ ವಿಭಾಗದಲ್ಲಿ ಖಾಲಿ ಇರುವ 2120 ದೈಹಿಕ ಶಿಕ್ಷಕರು ಹಾಗೂ ಪ್ರೌಢಶಾಲಾ ವಿಭಾಗದಲ್ಲಿ 2500 ಹುದ್ದೆಗಳ ಭರ್ತಿ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಸಮಾಲೋಚನೆಯಲ್ಲಿದೆ. ಪದವಿಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ಶೀಘ್ರವೇ ನೇಮಕ ಮಾಡಲಾಗುವುದು ಎಂದರು.

# ಜಕ್ಕಲಿಯಲ್ಲಿ ಬಸ್ ತಡೆದು ಪ್ರತಿಭಟನೆ



**■ವಿಜಯಸಾಕ್ಷಿ ಸುದ್ದಿ, ರೋಣ**

ಸಮಯಕ್ಕೆ ಸರಿಯಾಗಿ ಸಾರಿಗೆ ಬಸ್ ಬಾರದೆ ಇರುವುದರಿಂದ ಬೇಸತ್ತ ಶಾಲಾ-ಕಾಲೇಜು ವಿದ್ಯಾರ್ಥಿಗಳು ಜಕ್ಕಲಿ ಗ್ರಾಮದಲ್ಲಿ ಸೋಮವಾರ ಬಸ್ ತಡೆದು ಪ್ರತಿಭಟನೆ ನಡೆಸಿದರು.

ರೋಣ ಸಾರಿಗೆ ಘಟಕದಿಂದ ಬಸ್ ವ್ಯವಸ್ಥೆ ಸರಿಯಾಗಿ ನಿರ್ವಹಣೆಯಾಗುತ್ತಿಲ್ಲ ಎಂದು ಹಲವಾರು ಬಾರಿ ವಿದ್ಯಾರ್ಥಿಗಳು ಘಟಕದ ವ್ಯವಸ್ಥಾಪಕರ ಗಮನಕ್ಕೆ ತಂದಿದ್ದರೂ ಸಹ ಅಧಿಕಾರಿಗಳು ಸ್ಪಂದಿಸದೆ ಇರುವುದರಿಂದ ವಿದ್ಯಾರ್ಥಿಗಳು ದಿಢೀರ್ ಪ್ರತಿಭಟನೆ ನಡೆಸಿದರು.

ಬೆಳಿಗ್ಗೆ 6ಕ್ಕೆ ಬರಬೇಕಾದ ಬಸ್ 7.30ಕ್ಕೆ, 7ಕ್ಕೆ ಬರಬೇಕಾದ ಬಸ್ 9ಕ್ಕೆ ಬರುತ್ತಿರುವುದರಿಂದ ಮತ್ತಷ್ಟು ಸಮಸ್ಯೆ ಉದ್ಭವಿಸಿದ್ದು, ತರಗತಿಗಳನ್ನು ತಲುಪಲು ವಿಳಂಬವಾಗುತ್ತಿದೆ ಎಂದು ವಿದ್ಯಾರ್ಥಿಗಳು ಆರೋಪಿಸಿದರು. ಸ್ಥಳಕ್ಕಾಗಮಿಸಿದ ನಿಯಂತ್ರಣಾಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

# ಶಿರಹಟ್ಟಿಯಲ್ಲಿ ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ನೆರೆ ರಾಜ್ಯಗಳಾದ ರಾಜಸ್ಥಾನ, ಮಧ್ಯಪ್ರದೇಶ, ಛತ್ತೀಸ್‌ಗಡದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ವಿಜಯ ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಶ್ರೀ ಆಂಜನೇಯ ದೇವಸ್ಥಾನದ ಹತ್ತಿರ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಮುಖ ನಾಗರಾಜ ಲಕ್ಕುಂಡಿ, ತಾಲೂಕಾಧ್ಯಕ್ಷ ಫಕ್ಕೀರೇಶ ರಟ್ಟಿಹಳ್ಳಿ, ನಾಗರಾಜ ಲಕ್ಕುಂಡಿ, ಬಿ.ಡಿ. ಪಲ್ಲೇದ, ತಿಪ್ಪಣ್ಣ ಕೊಂಚಿಗೇರಿ, ಜಾನು ಲಮಾಣಿ, ಸಂದೀಪ ಕಪ್ಪತ್ತನವರ, ಯಲ್ಲಪ್ಪ ಇಂಗಳಗಿ, ತಿಪ್ಪಣ್ಣ ಲಮಾಣಿ, ಜಗದೀಶ ಹಳೇಮನಿ, ಪ್ರವೀಣ ಛಬ್ಬಿ, ಜಗದೀಶ ತೇಲಿ ಮುಂತಾದವರು ಉಪಸ್ಥಿತರಿದ್ದರು.

# ಆಯಿಲ್ ಇಂಜಿನ್ ಕಳುವಿಗೆ ವಿಫಲ ಯತ್ನ

**■ವಿಜಯಸಾಕ್ಷಿ ಸುದ್ದಿ, ರೋಣ**

ಮಾರನಬಸರಿ ಗ್ರಾಮದಲ್ಲಿ ನಿಲ್ಲಿಸಿಟ್ಟ ಬೈಕ್ ಪೆಟ್ರೋಲ್ ಕಳ್ಳರ ಹಾವಳಿ ಹೆಚ್ಚಾಗಿತ್ತು. ಇದೀಗ, ರೈತರು ಉಪಯೋಗಿಸುವ ಆಯಿಲ್ ಇಂಜಿನ್ ಕಳ್ಳತನಕ್ಕೆ ಯತ್ನಿಸಿರುವ ಘಟನೆ ಬೆಳಕಿಗೆ ಬಂದಿದೆ.

ಗ್ರಾಮದ ನರೇಗಲ್ಲ ದಾರಿ ಹಳ್ಳಕ್ಕೆ ಹೊಂದಿಕೊಂಡಿರುವ ಹನ್ಮಂತಪ್ಪ ಕಲ್ಮಣಿ ಎಂಬುವರ ಜಮೀನಿನಲ್ಲಿ ಕೃಷಿ ಹೊಂಡಕ್ಕೆ ಉಪಯೋಗಿಸುತ್ತಿದ್ದ ಆಯಿಲ್ ಇಂಜಿನ್ ಕಳ್ಳತನ ಮಾಡುವ ವಿಫಲ ಯತ್ನ ನಡೆದಿದೆ. ಕೃಷಿ ಹೊಂಡದ ನೀರನ್ನು ಬೇಸಾಯಕ್ಕೆ



ಬಳಸಿಕೊಳ್ಳುತ್ತಿದ್ದ ಹನ್ಮಂತಪ್ಪ ಕಲ್ಮಣಿ ಆಯಿಲ್ ಇಂಜಿನ್ ಜೋಡಿಸಿರುವುದನ್ನು ಗಮನಿಸಿರುವ ಕಳ್ಳರು, ಪೈಪ್‌ನ್ನು ತುಂಡರಿಸಿ ಇಂಜಿನ್‌ನ್ನು ಹಳ್ಳದವರೆಗೆ ತೆಗೆದು-ಕೊಂಡು ಹೋಗಿದ್ದಾರೆ. ಅಲ್ಲಿ ಹಳ್ಳದ ಮೂಲಕ ಇಂಜಿನ್ ಸಾಗಿಸಲು ಸಾಧ್ಯವಾಗದೆ ಅಲ್ಲಿಯೇ ಬಿಟ್ಟು ಪರಾರಿಯಾಗಿದ್ದಾರೆನ್ನಲಾಗಿದೆ.

ಈ ಘಟನೆ ರೈತರು ಸೇರಿದಂತೆ ಗ್ರಾಮಸ್ಥರನ್ನು ಚಿಂತೆ-ಗೀಡು ಮಾಡಿದ್ದು, ಪೊಲೀಸರು ಗಸ್ತು ಹೆಚ್ಚಿಸುವ ಮೂಲಕ ಧೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka